ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸ ಪತ್ರಿಕೆ

ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಸಂಪುಟ : 4 । ಸಂಚಿಕೆ : 4 । ಏಪ್ರಿಲ್ 2022 । ಪುಟಗಳು : 20 । ಬೆಲೆ : 25/-

## ಬೆಂಗಳೂರಿನಲ್ಲಿ ಸಹಕಾರ ಸಮ್ಮೇಳನ ಉದ್ಘಾಟನೆ



## "ಸಹಕಾರ ರತ್ನ" ಪ್ರಶಸ್ತಿ ಪ್ರದಾನ






ಸೌಹಾರ್ದ ಸಹಕಾರಿ ಸೌಧವನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಷಾ ಅವರು ವರ್ಚುಯಲ್ ಮೂಲಕ ಉದ್ಘಾಟಿಸಿದರು.



ಕ್ಷೀರ ಸಮೃದ್ಧಿ ಸಹಕಾರಿ ಬ್ಯಾಂಕಿನ ಲಾಂಛನ ಮತ್ತು ಯಶಸ್ವಿನಿ ಯೋಜನೆಯ ಲಾಂಛನವನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಷಾ ಮತ್ತು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರುಗಳು ಲೋಕಾರ್ಪಣೆಗೊಳಿಸಿದರು.



ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಷಾ ಅವರಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಮತ್ತು ವೇದಿಕೆಯ ಮೇಲಿನ ಗಣ್ಯರು ಹಸು ಮತ್ತು ಕರುವಿನ ಬೆಳ್ಳಿಯ ವಿಗ್ರಹವನ್ನು ನೀಡಿ ಗೌರವಿಸಿದರು.



ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಷಿ ಅವರಿಗೆ ಸಚಿವರುಗಳು ಹಸು ಮತ್ತು ಕರುವಿನ ಬೆಳ್ಳಿಯ ವಿಗ್ರಹವನ್ನು ನೀಡಿ ಗೌರವಿಸಿದರು.




ಕೆ.ಎಂ.ಎಫ್. ಉತ್ಪನ್ನಗಳ ವೀಕ್ಷಣೆ

# ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದ ಸ್ಮರಣೀಯ ಚಿತ್ರಗಳು







## ಸಂಪಾದಕೀಯ



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ಅಧ್ಯಕ್ಷರು

**ದೇಶದ ಸಹಕಾರ ಚಳವಳಿಗೆ ನಾಂದಿ ಹಾಡಿರುವ ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ಹಾಲು ಮಹಾಮಂಡಳಿಯ ನೇತೃತ್ವದಲ್ಲಿ "ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್"ನ ಸ್ಥಾಪನೆಯಾಗಲಿದ್ದು, ಉದ್ದೇಶಿತ ಬ್ಯಾಂಕಿನ ಲಾಂಛನ ಮತ್ತು ರಾಜ್ಯದ ಎಲ್ಲಾ ಸಹಕಾರಿಗಳ ಜೀವ ಸಂಜೀವಿನಿಯಾಗಿರುವ ಯಶಸ್ವಿನಿ ಯೋಜನೆಯನ್ನು ಮರುಜಾರಿಗೊಳಿಸಿರುವ ಸರ್ಕಾರ ಈ ಯೋಜನೆಯ ಮರುವಿನ್ಯಾಸಗೊಳಿಸಿದ ಲಾಂಛನವನ್ನು ಬಿಡುಗಡೆಗೊಳಿಸಿದ್ದಾರೆ.**

# ಸಹಕಾರ ಸಂಘಗಳಲ್ಲಿ ಪಾರದರ್ಶಕ ಆಡಳಿತಕ್ಕೆ ಒತ್ತು ಸಹಕಾರ ರತ್ನ ಪ್ರಶಸ್ತಿ ಪ್ರದಾನ

ಏಪ್ರಿಲ್ 1 ರಂದು ಬೆಂಗಳೂರಿನಲ್ಲಿ ಸಹಕಾರ ಇಲಾಖೆ ಹಾಗೂ ರಾಜ್ಯದ ಎಲ್ಲಾ ರೀತಿಯ ಸಹಕಾರ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಸಹಕಾರ ಸಮ್ಮೇಳನವನ್ನು ಸಹಕಾರಿ ಮುಖಂಡರು, ಕೇಂದ್ರ ಗೃಹ ಮತ್ತು ಸಹಕಾರ ಸಚಿವರಾದ ಅಮಿತ್ ಷಾ ಅವರು ಉದ್ಘಾಟಿಸಿ ಮಾತನಾಡುತ್ತಾ ಸಹಕಾರ ಸಂಘಗಳಲ್ಲಿ ಪಾರದರ್ಶಕ ಆಡಳಿತಕ್ಕೆ ತಂತ್ರಜ್ಞಾನ ಅಳವಡಿಕೆ, ಕೃಷಿ ಪತ್ತಿನ ವ್ಯವಸ್ಥೆ ಬಲಪಡಿಸಲು ದೇಶದಾದ್ಯಂತ ಏಕರೂಪ ತಂತ್ರಾಂಶವನ್ನು ಅನುಷ್ಠಾನಗೊಳಿಸುವ ಬಗ್ಗೆ ಹೇಳಿರುವುದು ಅತ್ಯಂತ ಸ್ವಾಗತಾರ್ಹ ವಿಚಾರ. ಹಲವು ರಾಷ್ಟ್ರಗಳಲ್ಲಿ ಆರ್ಥಿಕತೆ ಏರುಪೇರಾದರೂ ಸಹಕಾರ ಚಳವಳಿ ಬಲವಾಗಿರುವ ರಾಷ್ಟ್ರಗಳಲ್ಲಿ ಆರ್ಥಿಕತೆ ಸದೃಢವಾಗಿರುವುದು ಪ್ರಶಂಸನೀಯ ವಿಚಾರವಾಗಿದೆ. ದೇಶದಲ್ಲಿ ಸಹಕಾರ ಚಳವಳಿಯನ್ನು ಬಲಪಡಿಸಲು ಕೆಲವೇ ವರ್ಷಗಳಲ್ಲಿ 3 ಲಕ್ಷಕ್ಕೂ ಆರ್ಥಿಕ ಸಹಕಾರ ಸಂಘಗಳನ್ನು ಆರಂಭಿಸುವ ಬಗ್ಗೆ ಕೇಂದ್ರ ಸಹಕಾರ ಸಚಿವರು ತಿಳಿಸಿರುವುದರಿಂದ ಕೋಟ್ಯಾಂತರ ಜನರಿಗೆ ಸಹಕಾರ ಸೇವೆಗಳು ವಿಸ್ತರಣೆಯಾಗುವುದರ ಜೊತೆಗೆ ಲಕ್ಷಾಂತರ ಉದ್ಯೋಗ ಸೃಷ್ಠಿಗೂ ಕಾರಣವಾಗುತ್ತದೆ. ಸಹಕಾರ ಸಂಘಗಳು ಮತ್ತಷ್ಟು ಪರಿಣಾಮಕಾರಿ ಸೇವೆ ಸಲ್ಲಿಸುವ ಮೂಲಕ ಚಳವಳಿಯನ್ನು ಗಟ್ಟಿಗೊಳಿಸಬೇಕಾದ ಅವಶ್ಯಕತೆಯೂ ಇದೆ.

ದೇಶದ ಸಹಕಾರ ಚಳವಳಿಗೆ ನಾಂದಿ ಹಾಡಿರುವ ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ಹಾಲು ಮಹಾಮಂಡಳಿಯ ನೇತೃತ್ವದಲ್ಲಿ "ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್"ನ ಸ್ಥಾಪನೆಯಾಗಲಿದ್ದು, ಉದ್ದೇಶಿತ ಬ್ಯಾಂಕಿನ ಲಾಂಛನ ಮತ್ತು ರಾಜ್ಯದ ಎಲ್ಲಾ ಸಹಕಾರಿಗಳ ಜೀವ ಸಂಜೀವಿನಿಯಾಗಿರುವ "ಯಶಸ್ವಿನಿ" ಯೋಜನೆಯನ್ನು ಮರುಜಾರಿಗೊಳಿಸಿರುವ ಸರ್ಕಾರ ಈ ಯೋಜನೆಯ ಮರುವಿನ್ಯಾಸಗೊಳಿಸಿದ ಲಾಂಛನವನ್ನು ಮುಖ್ಯಮಂತ್ರಿಗಳು ಬಿಡುಗಡೆಗೊಳಿಸಿದ್ದಾರೆ. ಮುಂಬರುವ ದಿನಗಳಲ್ಲಿ ಎಲ್ಲಾ ಸಹಕಾರಿ ಸದಸ್ಯರು ಮತ್ತು ಅವರ ಕುಟುಂಬದ ಸದಸ್ಯರುಗಳು ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಲ್ಲಿ ಸದಸ್ಯರಾಗಿ ಕಡಿಮೆ ವಂತಿಗೆ ಪಾವತಿಸಿ 800ಕ್ಕೂ ಅಧಿಕ ಬಗೆಯ ಕಾಯಿಲೆಗಳಿಗೆ ಚಿಕಿತ್ಸೆ–ಶಸ್ತ್ರ ಚಿಕಿತ್ಸೆಗಳಿಗೆ ಹೆಚ್ಚು ಪ್ರಯೋಜನ ಪಡೆಯಬಹುದಾಗಿದೆ. ಈ ಯೋಜನೆಗಳನ್ನು ಜಾರಿಗೊಳಿಸಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೂ ಪತ್ತಿನ ಸಹಕಾರ ಮಹಾಮಂಡಳದ ಆಡಳಿತ ಮಂಡಳಿ ಮತ್ತು ರಾಜ್ಯದ ಎಲ್ಲಾ ಸಹಕಾರಿಗಳ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇವೆ.

ಮಾರ್ಚ್ 20 ರಂದು ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ವಸತಿ ಮಹಾಮಂಡಳ ಮತ್ತು ಸಹಕಾರ ಇಲಾಖೆ ಸಂಯುಕ್ತ ಆಶ್ರಯದಲ್ಲಿ ರಾಜ್ಯ ಸಹಕಾರ ಚಳವಳಿಯ ಬಲವರ್ಧನೆಗೆ ಶ್ರಮಿಸುತ್ತಿರುವ ಸಹಕಾರಿಗಳನ್ನೂ ಗುರುತಿಸಿ "ಸಹಕಾರ ರತ್ನ" ಪ್ರಶಸ್ತಿ ಪ್ರದಾನ ಮಾಡಿರುವುದು ಸಹಕಾರಿಗಳಲ್ಲಿ ಹೆಚ್ಚು ಉತ್ಸಾಹ ಮೂಡಿಸುವುದರ ಜೊತೆಗೆ ಸಹಕಾರಿಗಳಲ್ಲಿ ಜವಾಬ್ದಾರಿಯನ್ನು ಹೆಚ್ಚಿಸಿದೆ.

ಈ ಬಾರಿಯು "ಸಹಕಾರ ರತ್ನ" ಪ್ರಶಸ್ತಿ ಪುರಸ್ಕೃತರಲ್ಲಿ ವಿಶೇಷವಾಗಿ ಪತ್ತಿನ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ವಿ.ರಾಜು ಮತ್ತು ಶ್ರೀ ಚಿತ್ತರಂಜನ್ ಬೋಳಾರ್ ಅವರುಗಳನ್ನು ಆಯ್ಕೆ ಮಾಡಿರುವುದು ಸ್ವಾಗತಾರ್ಹ ವಿಚಾರವಾಗಿದೆ. ಸಹಕಾರ ರತ್ನ ಪುರಸ್ಕೃತರನ್ನು ಆಯ್ಕೆಮಾಡಿದ ಸಮಿತಿಯ ಎಲ್ಲಾ ಸದಸ್ಯರಿಗೂ ಪತ್ತಿನ ಮಹಾಮಂಡಳ ಕೃತಜ್ಞತೆಗಳನ್ನು ಸಲ್ಲಿಸುತ್ತದೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ



**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org



**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ**

ಉಪಸಂಪಾದಕರು :
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್ ಗೌಡ**

ಸದಸ್ಯರು :
**ಶ್ರೀ ಕೆ. ಕೃಷ್ಣಮೂರ್ತಿ, ಶ್ರೀ ಜಿ. ಮಲ್ಲಿಕಾರ್ಜುನಯ್ಯ**
**ಶ್ರೀ ಹೆಚ್.ಟಿ. ನಾಗೇಶ್, ಶ್ರೀ ಚಿತ್ತರಂಜನ್ ಬೋಳಾರ್**

ಸಂಪಾದಕರು : **ಶ್ರೀ ಕೆ.ಎಸ್. ಗುರುಪ್ರಸಾದ್**

**ಶ್ರೀಮತಿ ಪಿ. ಆಶಾಲತಾ**
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ)


# ಡಾ. ಬಿ.ಡಿ. ಭೂಕಾಂತ ಅವರಿಗೆ "ಡಾ. ವರ್ಗೀಸ್ ಕುರಿಯನ್ ಸಹಕಾರ ರತ್ನ" ಪ್ರಶಸ್ತಿ




ದಿನಾಂಕ : 27.03.2022ರಂದು ಬೆಂಗಳೂರಿನ ಆರ್.ಕೆ. ರಾಯಲ್ ಸಭಾಂಗಣದಲ್ಲಿ ನಡೆದ ಐಕಾನ್ ಆಫ್ ಇಂಡಿಯಾ ಬಿಜಿನೆಸ್ ಸಂಸ್ಥೆಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪತ್ತಿನ ಮಹಾಮಂಡಳದ ನಿರ್ದೇಶಕರಾದ ಡಾ. ಬಿ.ಡಿ. ಭೂಕಾಂತ ಇವರಿಗೆ "ಡಾ. ವರ್ಗೀಸ್ ಕುರಿಯನ್ ಸಹಕಾರ ರತ್ನ" ಪ್ರಶಸ್ತಿ ನೀಡಲಾಯಿತು. ಸಮಾರಂಭದಲ್ಲಿ ಚಲನಚಿತ್ರ ನಿರ್ದೇಶಕ ಮಂಜುನಾಥ, ಡಾ॥ ಅಂಜನಪ್ಪ, ಶ್ರೀನಿವಾಸ ಬಸವರಾಜ ಹಲವಾರು ಗಣ್ಯರು ಉಪಸ್ಥಿತರಿದ್ದರು.

**ಸುಭಾಷಿತ :** ರೋಗ ಬಂದವರೆಲ್ಲಾ ಸಾಯುವುದಿಲ್ಲ, ಸಾಯಲು ರೋಗ ಬರಬೇಕೆಂದೇನೂ ಇಲ್ಲ – ಶಿವಕುಮಾರಸ್ವಾಮೀಜಿ, ಸಿದ್ದಗಂಗಾ ಮಠ


ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1500/-



ಸೂಚನೆ :
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

## ಬೆಂಗಳೂರಿನಲ್ಲಿ ಸಹಕಾರ ಸಮ್ಮೇಳನ ಉದ್ಘಾಟನೆ
## ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್ ಮತ್ತು ಯಶಸ್ವಿನಿ ಯೋಜನೆ ಲಾಂಛನಗಳ ಬಿಡುಗಡೆ
## ಸಹಕಾರ ಸಂಸ್ಥೆಗಳಲ್ಲಿ ಪಾರದರ್ಶಕ ಆಡಳಿತಕ್ಕೆ ಏಕರೂಪದ ತಂತ್ರಾಂಶ ಕರ್ನಾಟಕ ಸಹಕಾರ ಆಂದೋಲನದ ಪ್ರಗತಿಗೆ
# ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಶ್ಲಾಘನೆ



ಸಹಕಾರ ಸಮ್ಮೇಳನ ಕಾರ್ಯಕ್ರಮದಲ್ಲಿ ರಾಜ್ಯದ ಸಹಕಾರ ಕ್ಷೇತ್ರದ ಪ್ರಮುಖ ಬೇಡಿಕೆಗಳನ್ನು ಕೇಂದ್ರ ಸರ್ಕಾರ ಈಡೇರಿಸುವಂತೆ ಮನವಿ ಪತ್ರವನ್ನು ರಾಜ್ಯದ ಎಲ್ಲಾ ಸಹಕಾರಿಗಳ ಪರವಾಗಿ ಸಹಕಾರ ಸಚಿವ ಎಸ್.ಟಿ. ಸೋಮಶೇಖರ್, ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ, ಕೆ.ಎಂ.ಎಫ್. ಅಧ್ಯಕ್ಷರಾದ ಬಾಲಚಂದ್ರ ಜಾರಕಿಹೊಳಿ, ಸೌಹಾರ್ದ ಸಹಕಾರಿ ಅಧ್ಯಕ್ಷರಾದ ಬಿ.ಹೆಚ್. ಕೃಷ್ಣಾರೆಡ್ಡಿ ಅವರುಗಳು ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಅವರಿಗೆ ಸಲ್ಲಿಸಿದರು.

**ಬೆಂಗಳೂರು :** ಸಹಕಾರ ಸಂಘ ಸಂಸ್ಥೆಗಳ ಆಡಳಿತ ಪಾರದರ್ಶಕವಾಗಿರಬೇಕು. ಈ ನಿಟ್ಟಿನಲ್ಲಿ ಕೃಷಿ ಪತ್ತಿನ ವ್ಯವಸ್ಥೆಯನ್ನು ಬಲಪಡಿಸುವ ಜೊತೆಗೆ ದೇಶದಾದ್ಯಂತ ಏಕರೂಪದ ತಂತ್ರಾಂಶವನ್ನು ಶೀಘ್ರವೇ ಅಳವಡಿಸಲಾಗುವುದು. ಕರ್ನಾಟಕ ರಾಜ್ಯದ ಸಹಕಾರ ಆಂದೋಲನದ ಪ್ರಗತಿ ಶ್ಲಾಘನೀಯವಾಗಿದೆ ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ತಿಳಿಸಿದರು.

ಏಪ್ರಿಲ್ 1 ರಂದು ನಗರದ ಬೆಂಗಳೂರು ಅರಮನೆಯ ಪ್ರಾಂಗಣದಲ್ಲಿ ಸಹಕಾರ ಇಲಾಖೆ ಹಾಗೂ ರಾಜ್ಯದ ಎಲ್ಲಾ ರೀತಿಯ ಸಹಕಾರ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ "ಸಹಕಾರ ಸಮ್ಮೇಳನ" ಕಾರ್ಯಕ್ರಮವನ್ನು ಉದ್ಘಾಟಿಸುವುದರ ಜೊತೆಗೆ ಉದ್ದೇಶಿತ "ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕಿನ" ಲಾಂಛನ, ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯ ಲಾಂಛನ ಬಿಡುಗಡೆ ಹಾಗೂ ಸೌಹಾರ್ದ ಸಹಕಾರ ಸೌಧದ ವರ್ಚುಯಲ್ ಉದ್ಘಾಟನೆ ನೆರವೇರಿಸಿ ಅವರು ಸಹಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಗುಜರಾತ್, ಮಹಾರಾಷ್ಟ್ರ ರಾಜ್ಯಗಳಂತೆ ಕರ್ನಾಟಕ ರಾಜ್ಯವು ಸಹಕಾರ ವಲಯದಲ್ಲಿ ಸಾಧನೆ ಮಾಡಿದೆ. ದೇಶದಲ್ಲಿ ಕರ್ನಾಟಕ ರಾಜ್ಯ ಸಹಕಾರ ವಲಯದಲ್ಲಿ ಅಗ್ರ ಸ್ಥಾನದಲ್ಲಿದೆ ಎಂದು ಶ್ಲಾಘಿಸಿದ ಅವರು, ರಾಜ್ಯದ ಸಹಕಾರ ಆಂದೋಲನವನ್ನು ಸುವರ್ಣ ಅಕ್ಷರಗಳಲ್ಲಿ ಬರೆದಿಡಬೇಕಾಗಿದೆ. ಸಹಕಾರ ಕ್ಷೇತ್ರ ವಿಸ್ತಾರವಾಗಿ ಬೆಳೆಯಲು ರಾಜ್ಯದ ಕೊಡುಗೆ ಅಪಾರವಾಗಿದೆ ಎಂದರು.

**ಸಹಕಾರ ನೀತಿ :** ರಾಷ್ಟ್ರದ ಸಹಕಾರ ಚಳವಳಿ ಬಲಗೊಂಡರೆ, ದೇಶದ ಆರ್ಥಿಕತೆ ಸದೃಢಗೊಳ್ಳುತ್ತದೆ. ಈ ನಿಟ್ಟಿನಲ್ಲಿ 2024ರ ವೇಳೆಗೆ ಸಹಕಾರ ಚಳವಳಿಯ ಬೆಳವಣಿಗೆಗೆ ಪೂರಕವಾಗುವಂತೆ ರಾಷ್ಟ್ರೀಯ ಸಹಕಾರ ನೀತಿಯನ್ನು ಜಾರಿಗೆ ತರಲು ಉದ್ದೇಶಿಸಲಾಗಿದೆ ಎಂದು ಸಚಿವ ಅಮಿತ್ ಶಾ ಅವರು ಅಭಿಪ್ರಾಯ ವ್ಯಕ್ತಪಡಿಸಿದರು. ಸಹಕಾರ ರಂಗದ ಕುರಿತು ಹೆಚ್ಚಿನ ಅರಿವು ಮೂಡಿಸಲು ಸಹಕಾರ ವಿಶ್ವವಿದ್ಯಾಲಯ ಆರಂಭಿಸಲಾಗುವುದು. ಸಹಕಾರ ಕ್ಷೇತ್ರವು ಸರ್ಕಾರದ ಹಸ್ತಕ್ಷೇಪ ಇಲ್ಲದೆ ಪಾರದರ್ಶಕವಾಗಿ ಕಾರ್ಯನಿರ್ವಹಿಸುವ ನಿಟ್ಟಿನಲ್ಲಿ ಸಹಕಾರ ನೀತಿಯನ್ನು ಜಾರಿಗೊಳಿಸುವ ಉದ್ದೇಶವೂ ಇದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ "ನಂದಿನಿ ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್" ಮಾದರಿಯ ಬ್ಯಾಂಕಾಗಿ ರೂಪುಗೊಳ್ಳಲಿದೆ. ಇದೊಂದು ಅದ್ಭುತ ಕಲ್ಪನೆ ಎಂದು ಬಣ್ಣಿಸಿದ ಅಮಿತ್ ಶಾ ಅವರು ಈ ಬ್ಯಾಂಕಿನ ಮೂಲಕ ರಾಜ್ಯದ ಹೈನುಗಾರರು ವಾರ್ಷಿಕ 20 ಸಾವಿರ ಕೋಟಿ ರೂ.ಗೂ ಅಧಿಕ ವ್ಯವಹಾರ ನಡೆಸಲಿದ್ದಾರೆ. ನಂದಿನಿ ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್ ಮೂಲಕ ಎಲ್ಲಾ ಹಾಲು ಉತ್ಪಾದಕರಿಗೆ ಕ್ರೆಡಿಟ್ ಕಾರ್ಡ್ ವಿತರಣೆ ಮಾಡಲು ಕ್ರಮ ಕೈಗೊಳ್ಳಬೇಕು. ಇದು ಪ್ರಾಯೋಗಿಕವಾಗಿ ಕರ್ನಾಟಕದಿಂದಲೇ ಆರಂಭವಾಗಲಿ. ಇದಕ್ಕೆ ಬೇಕಾದ ಎಲ್ಲ ಸಹಕಾರ-ಸಹಾಯವನ್ನು ಕೇಂದ್ರ ಸರ್ಕಾರ ನೀಡಲಿದೆ ಎಂದು ಆಶ್ವಾಸನೆ ನೀಡಿದರು. ಈ ಬ್ಯಾಂಕಿನ ಉದ್ದೇಶ ಹೈನುಗಾರರ ಉನ್ನತಿಗೆ ಪೂರಕವಾಗಿರಲಿದೆ, ಪ್ರೇರಕವಾಗಿರಲಿದೆ ಎಂದರು. ರಾಜ್ಯದಲ್ಲಿ

ಕರ್ನಾಟಕ ಹಾಲು ಮಹಾಮಂಡಳಿ ನೇತೃತ್ವದಲ್ಲಿ ಸಹಕಾರಿ ಹೈನುಕ್ಷೇತ್ರ ಅಭಿವೃದ್ಧಿಯತ್ತ ದಾಪುಗಾಲಿಟ್ಟು ಜನರ ಆರ್ಥಿಕ ಬಲವರ್ಧನೆಗೆ ಕಾರಣವಾಗಿದೆ ಎಂದರು.

**ಕೃಷಿ ಪತ್ತಿನ ವ್ಯವಸ್ಥೆ :** ದೇಶದಲ್ಲಿ ಕೃಷಿ ಪತ್ತಿನ ವ್ಯವಸ್ಥೆ ಉತ್ತಮವಾಗಿದೆ. ವಿಶೇಷವಾಗಿ ಕರ್ನಾಟಕದಲ್ಲಿ ಶೂನ್ಯ ಬಡ್ಡಿದರ ಮತ್ತು ರಿಯಾಯಿತಿ ಬಡ್ಡಿ ದರದಲ್ಲಿ ಸಾಲ ವಿತರಣೆಯಾಗುತ್ತಿರುವುದು ಸಂತಸದ ವಿಚಾರ. ಸಾಲ ವಿತರಣೆ ಮತ್ತು ನೇಮಕಾತಿ ವಿಚಾರಗಳಲ್ಲಿ ಸಹಕಾರ ವ್ಯವಸ್ಥೆ ಪಾರದರ್ಶಕವಾಗಿ ಕಾರ್ಯನಿರ್ವಹಿಸುವಂತಾಗಲು ಏಕರೂಪದ ತಂತ್ರಾಂಶ ಅಗತ್ಯವಿದ್ದು, ಶೀಘ್ರವೇ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ಎಂದರು. 'ಗ್ರಾಮೀಣ ಭಾಗದ ಆರ್ಥಿಕ ಮೂಲವೇ ಸಹಕಾರ ಕ್ಷೇತ್ರ. ಕೃಷಿಯಲ್ಲಿ ಶೇ.25, ಹಾಲು ಉತ್ಪಾದನೆಯಲ್ಲಿ ಶೇ.17, ಧಾನ್ಯ ಖರೀದಿಯಲ್ಲಿ ಶೇ. 20, ಹಸು ಖರೀದಿಯಲ್ಲಿ ಶೇ.15 ರಷ್ಟು ಸೇರಿದಂತೆ ನಾನಾ ವಲಯಗಳಲ್ಲಿ ಸಹಕಾರ ಕ್ಷೇತ್ರದ ಪಾಲು ಇದೆ. ನವ ಪೀಳಿಗೆಯು ಈ ಕ್ಷೇತ್ರವನ್ನು ಮುನ್ನಡೆಸಬೇಕಿದ್ದು, ಕೃಷಿ ಪತ್ತಿನ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದರು.

**ಹೈನೋದ್ಯಮದ ಮೊದಲ ಬ್ಯಾಂಕ್:** ಹೈನೋದ್ಯಮದಲ್ಲಿ ಮೊಟ್ಟ ಮೊದಲ "ನಂದಿನಿ ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್" ಸ್ಥಾಪನೆ ಮಾಡಿದ ಹೆಗ್ಗಳಿಕೆ ಕೂಡ ಈ ರಾಜ್ಯದ್ದು. ಸಿಎಂ ಬಸವರಾಜ ಬೊಮ್ಮಾಯಿ ಇದಕ್ಕಾಗಿ 100 ಕೋಟಿ ರೂ. ಅನುದಾನ ನೀಡಿರುವುದು ಶ್ಲಾಘನೀಯ ಎಂದು ಷಾ ಹೇಳಿದರು.

**ಬಡತನ ನಿರ್ಮೂಲನೆ ಸಂಕಲ್ಪ :** ಅಮೂಲ್ ಸಂಸ್ಥೆ, ಲಿಜ್ಜತ್ ಪಾಪಡ್, ಇಫ್ಕೋ, ಕ್ರಿಭ್ಕೋ ಸಂಸ್ಥೆಗಳು ಸಹಕಾರಿ ಆಂದೋಲನದ ಫಲಶೃತಿಗಳು. ಕರ್ನಾಟಕ ನಂದಿನಿ ಸಹ ಇದರಲ್ಲಿ ಮುಂಚೂಣಿಯಲ್ಲಿದೆ. ಸಹಕಾರ ಕ್ಷೇತ್ರದಲ್ಲಿ ಅಭಿವೃದ್ಧಿಗೆ ಸಾಕಷ್ಟು ಅವಕಾಶಗಳಿವೆ. ಜತೆ ಜತೆಗೆ ಸವಾಲುಗಳೂ ಇವೆ. ಆ ಸವಾಲುಗಳನ್ನು ಮೆಟ್ಟಿ ನಿಲ್ಲದೇ ಇದ್ದರೆ ಸಹಕಾರ ಆಂದೋಲನಕ್ಕೆ ಕಷ್ಟವಿದೆ. ಹಾಗಾಗಿ, 75ನೇ ಸ್ವಾತಂತ್ರ್ಯ ಮಹೋತ್ಸವದ ವೇಳೆಯಲ್ಲಿ ನಾವು ಒಂದು ಸಂಕಲ್ಪ ಮಾಡಬೇಕು. ದೇಶದ ಸ್ವಾತಂತ್ರ್ಯೋತ್ಸವದ ಶತಮಾನೋತ್ಸವದ ವೇಳೆಗೆ ನಾವು ಪ್ರತಿಯೊಂದು ಕುಟುಂಬಕ್ಕೂ ಸಹಕಾರ ಆಂದೋಲನವನ್ನು ಮುಟ್ಟಿಸುವ ಮೂಲಕ ಬಡತನವನ್ನು ಹೊಡೆದೋಡಿಸಬೇಕಾಗಿದೆ ಎಂದು ಕರೆ ನೀಡಿದರು.

**ಸವಾಲು ಮೆಟ್ಟಿ ನಿಲ್ಲಲು ಕರೆ :** ಸಹಕಾರ ಕ್ಷೇತ್ರದಲ್ಲಿ ಅಭಿವೃದ್ಧಿಗೆ ವಿಪುಲ ಅವಕಾಶಗಳಿವೆ; ಸವಾಲುಗಳೂ ಇವೆ. ಆ ಸವಾಲುಗಳನ್ನು ಮೆಟ್ಟಿ ನಿಲ್ಲುವುದಕ್ಕೆ ದೃಢ ನಿಶ್ಚಯ ಮಾಡಬೇಕು. ಇಲ್ಲದಿದ್ದರೆ ಸಹಕಾರ ಆಂದೋಲನಕ್ಕೆ ಕಷ್ಟವಿದೆ ಎನ್ನುವ ಎಚ್ಚರಿಕೆಯನ್ನು ನೀಡಿದರು.

ಕಾರ್ಯಕ್ರಮದ ಆರಂಭದಲ್ಲಿ ಅಮಿತ್ ಷಾ ಅವರು ಸಹಕಾರ ಧ್ವಜಾರೋಹಣ ನೆರವೇರಿಸಿದರು. ನಂತರ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕೇಂದ್ರ ಮತ್ತು ರಾಜ್ಯದ ಸಚಿವರುಗಳೊಂದಿಗೆ ಗೋಮಾತಾ ಪೂಜೆ ನೆರವೇರಿಸಿ, ಅರಮನೆ ಆವರಣದಲ್ಲಿ ಸ್ಥಾಪಿಸಲಾಗಿದ್ದ ಕೆ.ಎಂ.ಎಫ್. ಸಿಹಿ ಉತ್ಪನ್ನಗಳ ಮಳಿಗೆಯನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

## ಯಶಸ್ವಿನಿ ಲಾಂಛನ ಬಿಡುಗಡೆ

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಹಕಾರ ಸಮ್ಮೇಳನದಲ್ಲಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯ ಹೊಸ ಲಾಂಛನವನ್ನು ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಅವರು ಸರ್ಕಾರ ಇಲ್ಲದ ಸಂದರ್ಭದಲ್ಲಿ ಸಹಕಾರ ಕ್ಷೇತ್ರ ಬೆಳೆದಿದೆ. ಈಗ ಸರ್ಕಾರ ಇದ್ದು, ಸಹಕಾರ ಕ್ಷೇತ್ರ ಬಲಪಡಿಸಲು ನಾನಾ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ಹೇಳಿದರು. ಸಹಕಾರಿಗಳ ಮನವಿಯ ಮೇರೆಗೆ ಹಾಗೂ ಯೋಜನೆಯ ಮಹತ್ವ, ಅಗತ್ಯತೆಯನ್ನು ಮನವರಿಕೆ ಮಾಡಿಕೊಂಡು "ಯಶಸ್ವಿನಿ" ಯೋಜನೆಯನ್ನು ಮರು ಜಾರಿಗೊಳಿಸಲಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಕೃಷಿ ನಂತರದಲ್ಲಿ ಗ್ರಾಮೀಣ ಭಾಗದ ಆರ್ಥಿಕ ಸಬಲೀಕರಣಕ್ಕೆ ಸಹಕಾರ ಕ್ಷೇತ್ರದ ಕೊಡುಗೆ ಅನನ್ಯ. 2022–23ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಪತ್ತಿನ ವ್ಯವಸ್ಥೆಯನ್ನು ಬಲಪಡಿಸುವ ಉದ್ದೇಶದಿಂದ 33 ಲಕ್ಷ ರೈತರಿಗೆ 24 ಸಾವಿರ ಕೋಟಿ ರೂ.ಗಳನ್ನು ಶೂನ್ಯಬಡ್ಡಿ ಮತ್ತು ರಿಯಾಯಿತಿ ಬಡ್ಡಿದರದಲ್ಲಿ ಸಾಲ ನೀಡುವ ಗುರಿ ಹೊಂದಿದ್ದೇವೆ. ಕ್ಷೀರ ಕ್ರಾಂತಿ ನಂತರ ರಾಜ್ಯದಲ್ಲಿ ಕ್ಷೀರ ಬ್ಯಾಂಕ್ ಆರಂಭಗೊಳ್ಳುತ್ತಿರುವುದು ಎರಡನೇ ಕ್ಷೀರ ಕ್ರಾಂತಿ ಎಂದು ಶ್ಲಾಘಿಸಿದರು.

**ಕೆ.ಎಂ.ಎಫ್. ಮಳಿಗೆ ಉದ್ಘಾಟನೆ :** ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಷಿ ರವರು ಮಾತನಾಡಿ, ಕೆ.ಎಂ.ಎಫ್. ಮಳಿಗೆ ಉದ್ಘಾಟಿಸಿದರು. ನಂತರ ಮುಂದಿನ 5 ವರ್ಷಗಳಲ್ಲಿ 3 ಲಕ್ಷಕ್ಕೂ ಅಧಿಕ ಸಹಕಾರ ಸಂಘಗಳನ್ನು ಹೆಚ್ಚಿಸುವ ಗುರಿ ಕೇಂದ್ರ ಸರ್ಕಾರ ಹೊಂದಿದೆ. ಠೇವಣಿದಾರರಿಗೆ 5 ಲಕ್ಷ ರೂ. ವರೆಗೆ ವಿಮೆ ಸೌಲಭ್ಯ ಒದಗಿಸಲಾಗಿದೆ ಹಾಗೂ ಕಳೆದ 7 ವರ್ಷಗಳಲ್ಲಿ ಕೇಂದ್ರದಿಂದ ಸಹಕಾರ ಕ್ಷೇತ್ರಕ್ಕೆ 73 ಸಾವಿರ ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ ಎಂದರು.

**ಪ್ರಾಸ್ತಾವಿಕ ನುಡಿ :** ಸಹಕಾರ ಸಚಿವರಾದ ಎಸ್.ಟಿ. ಸೋಮಶೇಖರ್ ರವರು ಮಾತನಾಡಿ, ರಾಜ್ಯ ಸರ್ಕಾರ ಸಹಕಾರ ಚಳವಳಿಯ ಬೆಳವಣಿಗೆಗೆ ಹೆಚ್ಚು ಒತ್ತು ನೀಡುತ್ತಿದ್ದು, ಎಲ್ಲಾ ವಲಯಗಳ ಸದೃಢತೆಗೆ ಯೋಜನೆಗಳನ್ನು ರೂಪಿಸುತ್ತಿದೆ. 2022–23ನೇ ಸಾಲಿನಲ್ಲಿ 33 ಲಕ್ಷ ರೈತರಿಗೆ 24000 ಕೋಟಿ ರೂ. ಸಾಲ ನೀಡುವ ಗುರಿ ಹೊಂದಲಾಗಿದೆ ಎಂದರು. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕೇಂದ್ರ ಕೃಷಿ ಇಲಾಖೆಯಿಂದ ಸಹಕಾರ ಸಚಿವಾಲಯವನ್ನು ಪ್ರತ್ಯೇಕಗೊಳಿಸಿ ರಾಷ್ಟ್ರದ ಸಹಕಾರಿ ಮುಖಂಡರು ಆಗಿರುವ ಅಮಿತ್ ಷಾ ಅವರನ್ನು ಕೇಂದ್ರ ಸಹಕಾರ ಸಚಿವರಾಗಿ ನೇಮಕ ಮಾಡಿರುವುದರಿಂದ ಸಹಕಾರ ಕ್ಷೇತ್ರದ ಬಲವರ್ಧನೆ ಸುಲಭವಾಗಲಿದೆ ಎಂದರು.



ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಸಚಿವರುಗಳು ಹಸು ಮತ್ತು ಕರುವಿನ ಬೆಳ್ಳಿಯ ವಿಗ್ರಹವನ್ನು ನೀಡಿ ಗೌರವಿಸಿದರು.

**ಸ್ವಾಗತ ನುಡಿ :** ಕರ್ನಾಟಕ ಹಾಲು ಮಹಾಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಬಾಲಚಂದ್ರ ಜಾರಕಿಹೊಳಿಯವರು ಕಾರ್ಯಕ್ರಮದ ಆರಂಭದಲ್ಲಿ ವೇದಿಕೆಯ ಮೇಲೆ ಇದ್ದ ಗಣ್ಯರುಗಳನ್ನು ಸ್ವಾಗತಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉನ್ನತ ಶಿಕ್ಷಣ ಸಚಿವ ಡಾ। ಸಿ.ಎನ್. ಅಶ್ವಥ್‌ನಾರಾಯಣ ಅವರು ವಹಿಸಿದ್ದರು.

ಸಹಕಾರ ಸಮ್ಮೇಳನದಲ್ಲಿ ರಾಜ್ಯ ಸರ್ಕಾರ ಮತ್ತು ರಾಜ್ಯದ ಎಲ್ಲಾ ಸಹಕಾರಿಗಳ ಪರವಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಹಕಾರ ಸಚಿವ ಎಸ್.ಟಿ. ಸೋಮಶೇಖರ್, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಟಿ. ದೇವೇಗೌಡ ಅವರುಗಳು ಸೇರಿದಂತೆ ಸಚಿವರು, ಸಹಕಾರಿ ಮುಖಂಡರುಗಳು, ಕೇಂದ್ರ ಗೃಹ ಮತ್ತು ಸಹಕಾರಿ ಸಚಿವ ಅಮಿತ್ ಷಾ ಅವರನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಕೇಂದ್ರ ಸಚಿವರುಗಳಾದ ಕು॥ ಶೋಭಾ ಕರಂದ್ಲಾಜೆ, ಭಗವಂತ ಖೂಬ, ಕರ್ನಾಟಕದ ಸಚಿವರುಗಳಾದ ಆರ್. ಅಶೋಕ, ಅರಗ ಜ್ಞಾನೇಂದ್ರ, ಅರಬೈಲ್ ಹೆಬ್ಬಾರ್ ಶಿವರಾಮ್, ಬಿ.ಸಿ. ಪಾಟೀಲ್, ಬಿ.ಎ. ಬಸವರಾಜ, ಪ್ರಭು ಬಿ. ಚವ್ಹಾಣ್, ಕೆ. ಗೋಪಾಲಯ್ಯ, ಆನಂದ್‌ಸಿಂಗ್, ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ, ಸಂಸದರುಗಳಾದ ಡಿ.ವಿ. ಸದಾನಂದಗೌಡ, ಅಣ್ಣಾಸಾಹೇಬ್ ಶಂಕರ್ ಜೊಲ್ಲೆ, ಶಾಸಕರಾದ ಸಿ.ಟಿ. ರವಿ, ಶಾಸಕರು ಹಾಗೂ ಕೆ.ಎಂ. ಎಫ್. ಅಧ್ಯಕ್ಷರಾದ ಬಾಲಚಂದ್ರ ಜಾರಕಿಹೊಳಿ, ಶಾಸಕರು ಹಾಗೂ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ, ಶಾಸಕರು ಹಾಗೂ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರಾದ ಬೆಳ್ಳಿ ಪ್ರಕಾಶ್, ಕಲ್ಬುರ್ಗಿ–ಯಾದಗಿರಿ ಡಿಸಿಸಿ ಬ್ಯಾಂಕ್ ಅಧ್ಯಕ್ಷರು ಹಾಗೂ ಶಾಸಕರಾದ ರಾಜ್‌ಕುಮಾರ್ ಪಾಟೀಲ್ ತೇಲ್ಕೂರ್, ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್.ಆರ್. ಉಮಾಶಂಕರ್, ಸಹಕಾರ ಸಂಘಗಳ ನಿಬಂಧಕರಾದ ಎಸ್. ಜಿಯಾಉಲ್ಲಾ ಅವರುಗಳು ಸೇರಿದಂತೆ ಜನಪ್ರತಿನಿಧಿಗಳು, ಸಹಕಾರಿ ಮುಖಂಡರುಗಳು, ಸಹಕಾರ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ವೇದಿಕೆಯ ಮುಂಭಾಗದಲ್ಲಿ ಶಾಸಕರುಗಳು, ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರುಗಳು, ವಿವಿಧ ಸಹಕಾರ ಮಹಾಮಂಡಳಗಳ, ಜಿಲ್ಲಾ ಹಾಲು ಒಕ್ಕೂಟಗಳ, ಡಿಸಿಸಿ ಬ್ಯಾಂಕುಗಳ ಅಧ್ಯಕ್ಷರುಗಳು, ನಿರ್ದೇಶಕರುಗಳು ಸೇರಿದಂತೆ ಅನೇಕ ಸಹಕಾರಿ ಗಣ್ಯರುಗಳು ಆಸೀನರಾಗಿದ್ದರು. ಹತ್ತು ಸಾವಿರಕ್ಕೂ ಹೆಚ್ಚು ಸಹಕಾರಿಗಳು ಭಾಗಿಯಾಗಿದ್ದುದು ದಾಖಲೆಯ ವಿಚಾರ.



ಸಹಕಾರ ಸಮ್ಮೇಳನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಜನಸ್ತೋಮ

"ಸಹಕಾರ ರತ್ನ" ಪ್ರಶಸ್ತಿ ಪ್ರದಾನ

# ಸಹಕಾರ ಕ್ಷೇತ್ರದ ಬೆಳವಣಿಗೆಗೆ ಸರ್ಕಾರದ ಸರ್ವ ರೀತಿಯ ನೆರವು : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭರವಸೆ



**ಬೆಂಗಳೂರು :** ರಾಜ್ಯದ ಸಹಕಾರ ಚಳವಳಿಯ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸಿರುವ ಹಾಗೂ ಶ್ರಮಿಸುತ್ತಿರುವ ಸಹಕಾರ ಗಣ್ಯರನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು "ಸಹಕಾರ ರತ್ನ" ರಾಜ್ಯ ಪ್ರಶಸ್ತಿ ನೀಡಿ ಸನ್ಮಾನಿಸಿ, ಗೌರವಿಸಿದರು.

ಅವರು ದಿನಾಂಕ: 20.3.2022 ರಂದು ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಮತ್ತು ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕೆಂಗೇರಿ ಉಪನಗರ, ಬೆಂಗಳೂರು ಇಲ್ಲಿನ ಗಣೇಶ ಮೈದಾನದಲ್ಲಿ ಆಯೋಜಿಸಲಾಗಿದ್ದ "ಸಹಕಾರ ರತ್ನ" ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ, ನಂತರ ಸಹಕಾರಿಗಳನ್ನು ಗೌರವಿಸಿ ಮಾತನಾಡಿದರು.

ರಾಜ್ಯದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳಿಂದಲೇ 17 ಸಾವಿರ ಕೋಟಿ ರೂ., ವಾರ್ಷಿಕ ವಹಿವಾಟು ನಡೆಯುತ್ತದೆ. ಈ ಕ್ಷೇತ್ರಕ್ಕೆ ಇನ್ನೂ ಹೆಚ್ಚಿನ ಪ್ರೋತ್ಸಾಹ ನೀಡಲು ಹಾಲು ಉತ್ಪಾದಕರಿಗೆ ಆರ್ಥಿಕ ಸೌಲಭ್ಯಗಳು ದೊರೆಯುವಂತೆ ಮಾಡಲು ಕೆಎಂಎಫ್‌ನೊಂದಿಗೆ ಜಂಟಿಯಾಗಿ 'ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್' ಸ್ಥಾಪಿಸಲಾಗುತ್ತಿದೆ. ಇದಕ್ಕಾಗಿ ಕೆಎಂಎಫ್ 260 ಕೋಟಿ ರೂ. ಹಾಗೂ ಸರ್ಕಾರ 100 ಕೋಟಿ ರೂ. ಬಂಡವಾಳ ಹೂಡಲಿವೆ. ಪ್ರಕ್ರಿಯೆ ಪ್ರಾರಂಭಿಸಲು ಈ ಕುರಿತು ಶೀಘ್ರವೇ ಸರ್ಕಾರ ಆದೇಶ ಹೊರಡಿಸಲಿದೆ ಎಂದರು. ರೈತರು ಉತ್ಪಾದಿಸುವ ಹಾಲಿಗೆ ಸರ್ಕಾರ ತಲಾ ಲೀಟರ್‌ಗೆ 5 ರೂ. ಪ್ರೋತ್ಸಾಹಧನ ನೀಡಲು 1,250 ಕೋಟಿ ರೂ. ನೀಡಲಾಗಿದೆ. ಇದನ್ನು 2022-23ನೇ ಸಾಲಿನಲ್ಲಿ 1,450 ಕೋಟಿ ರೂ.ಗೆ ಹೆಚ್ಚಿಸಲಾಗಿದೆ ಎಂದರು.

**ಮಹಿಳಾ ಸಹಕಾರ ಸಂಘಗಳು :** ರಾಜ್ಯದ ಆರ್ಥಿಕತೆಗೆ ಶೇ.30 ಜನರು ಮಾತ್ರ ಕೊಡುಗೆ ನೀಡುತ್ತಿದ್ದಾರೆ. ಉಳಿದ ಶೇ.70 ಜನರು ತಮ್ಮ ಜೀವನ ನಿರ್ವಹಣೆಗೆ ಮಾತ್ರ ದುಡಿಯುತ್ತಿದ್ದಾರೆ. ಹೀಗಾಗಿ ಮಹಿಳೆಯರೂ ಆರ್ಥಿಕತೆಗೆ ಕೊಡುಗೆ ನೀಡುವಂತೆ ಮಾಡುವ ಉದ್ದೇಶದಿಂದ ಪ್ರತಿ ತಾಲೂಕಿಗೊಂದರಂತೆ ಸರ್ಕಾರದಿಂದಲೇ ಮಹಿಳಾ ವಿವಿಧೋದ್ದೇಶ ಸಹಕಾರ ಸಂಘ ಆರಂಭಿಸಲಾಗುತ್ತದೆ. ಮಹಿಳೆಯರ ನೋಂದಣಿ ಶುಲ್ಕವನ್ನು ಮೊದಲ ವರ್ಷ ಸರ್ಕಾರವೇ ಭರಿಸಲಿದೆ. ಈ ಮೂಲಕ ಮಹಿಳೆಯರನ್ನು ಯಾವುದಾದರೂ ಉದ್ಯಮದಲ್ಲಿ ತೊಡಗಿಸಿ, ಆರ್ಥಿಕತೆಯಲ್ಲಿ ಭಾಗವಹಿಸಲು ಪ್ರೇರಣೆ ನೀಡಲಾಗುತ್ತದೆ ಎಂದರು.

**ಯಶಸ್ವಿನಿ ಯೋಜನೆ ಮರು ಜಾರಿ :** ರೈತರ ಆರೋಗ್ಯ ರಕ್ಷಣೆಗೆ ವರದಾನವಾಗಿದ್ದ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಮರು ಜಾರಿಗೊಳಿಸಲು ರಾಜ್ಯ ಸರ್ಕಾರ 300 ಕೋಟಿ ರೂ. ಅನುದಾನ ಮೀಸಲಿಟ್ಟಿದೆ ಎಂದು ತಿಳಿಸಿದರು.

**ರೂ. 23 ಸಾವಿರ ಕೋಟಿ ಸಾಲ ವಿತರಣೆ :** ಕೃಷಿ ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಹೂಡಿಕೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ 2021-22ನೇ ಸಾಲಿನಲ್ಲಿ 30 ಲಕ್ಷ ರೈತರಿಗೆ 20,180 ಕೋಟಿ ರೂ. ಶೂನ್ಯ ಬಡ್ಡಿದರದಲ್ಲಿ ಮಾರ್ಚ್ ಅಂತ್ಯದ ವೇಳೆಗೆ ಪೂರ್ಣ ಗುರಿ ಸಾಧಿಸಲಾಗುವುದು.

2022-23ನೇ ಸಾಲಿನಲ್ಲಿ 33 ಲಕ್ಷ ರೈತರಿಗೆ 24 ಸಾವಿರ ಕೋಟಿ ರೂ. ಸಾಲ ವಿತರಣೆ ಗುರಿ ಹೊಂದಲಾಗಿದ್ದು ಹೊಸ ಸದಸ್ಯರುಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಶಾಸಕರ ಅನುದಾನದಲ್ಲಿ ಸಹಕಾರಿ

ಸಂಘಗಳ ಕಟ್ಟಡಗಳ ನಿರ್ಮಾಣಕ್ಕೆ ಅನುಮತಿ ನೀಡಲಾಗುವುದು. ಸಹಕಾರ ರಂಗ ಬಂಡವಾಳಶಾಹಿ ಹಾಗೂ ಸಮತಾವಾದಕ್ಕೆ ಉತ್ತರವಾಗಿದ್ದು, ಸರ್ಕಾರದ ವಿವಿಧ ಇಲಾಖೆಗಳ ಹಣವನ್ನು ಜಿಲ್ಲಾ ಸಹಕಾರಿ ಬ್ಯಾಂಕ್‌ಗಳಲ್ಲಿ ಠೇವಣಿ ಇಡಲಾಗುವುದು. ಪಠ್ಯದಲ್ಲಿ ಸಹಕಾರಿ ಕ್ಷೇತ್ರದ ಅಧ್ಯಯನ ವಸ್ತು ಸೇರಿಸುವ ಬಗ್ಗೆ ಶಿಕ್ಷಣ ಇಲಾಖೆಯೊಂದಿಗೆ ಚರ್ಚೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಬಸವರಾಜ ಬೊಮ್ಮಾಯಿ ತಿಳಿಸಿದರು.

**ಶೂನ್ಯ ಬಡ್ಡಿ ಸಾಲ ರಾಜ್ಯದ ಹೆಮ್ಮೆ :** ಸಂಸದರಾದ ಡಿ.ವಿ. ಸದಾನಂದಗೌಡರು ಮಾತನಾಡಿ, ದೇಶದಲ್ಲಿ ಕರ್ನಾಟಕದಲ್ಲಿ ಮಾತ್ರವೇ ರೈತರಿಗೆ ಸಹಕಾರ ಕ್ಷೇತ್ರದಡಿ ಶೂನ್ಯ ಬಡ್ಡಿದರದ ಸಾಲ ವಿತರಿಸುತ್ತಿರುವುದು ಹೆಮ್ಮೆಯ ವಿಷಯವಾಗಿರುತ್ತದೆ. ಇನ್ನು ಕೇಂದ್ರ ಸರ್ಕಾರದ ಜನೌಷಧ ಕೇಂದ್ರಗಳನ್ನು ಸಹಕಾರ ಕ್ಷೇತ್ರದಿಂದಲೂ ನಡೆಸಲು ವೇದಿಕೆ ಒದಗಿಸಲಾಗುತ್ತಿದೆ ಎಂದರು.

ಪ್ರಪಂಚದಲ್ಲಿ 2010-11ರಲ್ಲಿ ಆರ್ಥಿಕ ಹಿನ್ನಡೆ ಉಂಟಾಗಿದ್ದಾಗ ಭಾರತದಲ್ಲಿ ಯಾವುದೇ ಕೆಟ್ಟ ಪರಿಣಾಮ ಬೀರಲಿಲ್ಲ. ಇದಕ್ಕೆ ಕಾರಣ ಮಹಿಳೆಯರು ಮನೆಯಲ್ಲಿ ಕೂಡಿಟ್ಟ ಹಣ ಮತ್ತು ಸಹಕಾರ ಸಂಘಗಳಲ್ಲಿ ಹೂಡಿಕೆ ಮಾಡಿದ ಬಂಡವಾಳವು ದೇಶದ ಕೈ ಹಿಡಿದಿತ್ತು. ಸರ್ಕಾರಕ್ಕೆ ಸಮಾನಾಂತರವಾಗಿ ಜೀವನ ನಡೆಸುವ ಮತ್ತೊಂದು ವೇದಿಕೆಯೆಂದರೆ ಅದು ಸಹಕಾರಿ ಕ್ಷೇತ್ರವಾಗಿದೆ ಎಂದರು. ಮುಂಬರುವ ದಿನಗಳಲ್ಲಿಯೂ ಸಹಕಾರ ಕ್ಷೇತ್ರ ಜನರ ಕೈಹಿಡಿಯಲಿದೆ ಎಂದರು.

**ಬದಲಾದ ಸಹಕಾರಿ ದೃಷ್ಟಿಕೋನ :** ಗೃಹ ಸಚಿವರಾದ ಅರಗ ಜ್ಞಾನೇಂದ್ರ ಅವರು ಮಾತನಾಡಿ, ಈ ಹಿಂದೆ ಸಹಕಾರ ಕ್ಷೇತ್ರವೆಂದರೆ ಕೇವಲ ಹುಲ್ಲುಗಾವಲು ಎಂದು ತಿಳಿದಿದ್ದು, ಈಗ ವಿದ್ಯಾವಂತರೂ ಈ ಕ್ಷೇತ್ರಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ನೋಡುವ ದೃಷ್ಟಿಕೋನ ಬದಲಾಗಿದೆ. ಸಹಕಾರ ಜೀವನದ ಎಲ್ಲಾ ಆಯಾಮಗಳನ್ನು ಆವರಿಸಿಕೊಂಡಿದ್ದು, ರಾಷ್ಟ್ರದ ಆರ್ಥಿಕ ಪ್ರಗತಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದೆ. ಈ ಕ್ಷೇತ್ರದ ಬೆಳವಣಿಗೆಗೆ ಸರ್ಕಾರ ಸದಾ ಬದ್ಧವಾಗಿರುತ್ತದೆ ಎಂದರು.

**33 ಲಕ್ಷ ಮಂದಿಗೆ ಸಾಲ ವಿತರಣೆ ಗುರಿ :**

2022-23ನೇ ಸಾಲಿನಲ್ಲಿ ರಾಜ್ಯದ 33 ಲಕ್ಷ ರೈತರಿಗೆ ಶೂನ್ಯ ಬಡ್ಡಿ ಮತ್ತು ರಿಯಾಯಿತಿ ಬಡ್ಡಿ ದರದಲ್ಲಿ 23 ಸಾವಿರ ಕೋಟಿ ರೂ. ಸಾಲ ನೀಡಲಾಗುತ್ತಿದೆ ಎಂದು ಸಹಕಾರ ಸಚಿವರಾದ ಎಸ್.ಟಿ. ಸೋಮಶೇಖರ್ ಅವರು ತಿಳಿಸಿದರು. ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ 5 ರೂ. ಪ್ರೋತ್ಸಾಹಧನವನ್ನು ನೀಡಲು 1050 ಕೋಟಿ ರೂ. ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿಡಲಾಗಿದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಡಾ। ಕೆ. ಸುಧಾಕರ್ ಅವರು ಮಾತನಾಡಿ, ರಾಜ್ಯದಲ್ಲಿ ರೈತರ ಆರೋಗ್ಯ ರಕ್ಷಣೆಗೆ ಯಶಸ್ವಿನಿ ಯೋಜನೆ ಮರುಜಾರಿಗೆ ಸರ್ಕಾರ 300 ಕೋಟಿ ರೂ. ಅನುದಾನ ಮೀಸಲಿಟ್ಟಿದೆ. ಕೂಡಲೇ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಿ ಯೋಜನೆ ಜಾರಿಗೊಳಿಸಲಾಗುವುದು ಎಂದರು. ಅಬಕಾರಿ ಸಚಿವರಾದ ಕೆ. ಗೋಪಾಲಯ್ಯ ಅವರು ಸಹಕಾರ ಪ್ರಗತಿ ವಿಶೇಷ ಸಂಚಿಕೆ ಬಿಡುಗಡೆ ಮಾಡಿದರು.

ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಪ್ರವಾಸೋದ್ಯಮ ಸಚಿವರಾದ ಆನಂದ್ ಸಿಂಗ್ ಅವರು ಕಾಸ್ಕಾರ್ಡ್ ಬ್ಯಾಂಕ್ ವತಿಯಿಂದ ಫಲಾನುಭವಿಗಳಿಗೆ ದೀರ್ಘಾವಧಿ ಸಾಲ ವಿತರಣೆ ಮಾಡಿದರು.

ನಗರಾಭಿವೃದ್ಧಿ ಸಚಿವರಾದ ಬೈರತಿ ಬಸವರಾಜು ಅವರು ಡಿಸಿಸಿ ಬ್ಯಾಂಕ್ ವತಿಯಿಂದ ಫಲಾನುಭವಿಗಳಿಗೆ ಕೃಷಿ ಸಾಲ ವಿತರಣೆ ಮಾಡಿದರು. ಇದೇ ಸಂದರ್ಭದಲ್ಲಿ ಗಣ್ಯರು ಸಹಕಾರ ವಾರಪತ್ರಿಕೆ ವಿಶೇಷ ಸಂಚಿಕೆ, ಸಹಕಾರ ಮಹಾಮಂಡಳದ ಕಾರ್ಯಚಟುವಟಿಕೆಗಳ ಕೈಪಿಡಿಯನ್ನು ಬಿಡುಗಡೆ ಮಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಹಕಾರ ಧ್ವಜಾರೋಹಣ ನೆರವೇರಿಸಿದರು. ನಂತರ ಸಹಕಾರಿ ಪಿತಾಮಹಾ ಸಿದ್ದನಗೌಡ ಸಂಣರಾಮನಗೌಡ ಪಾಟೀಲ್, ಮಹಾತ್ಮಾಗಾಂಧಿ, ಪಂಡಿತ್ ಜವಹರಲಾಲ್ ನೆಹರೂ ಅವರುಗಳ ಭಾವಚಿತ್ರಗಳಿಗೆ ಗಣ್ಯರು ಪುಷ್ಪಾರ್ಚನೆ ಸಲ್ಲಿಸಿ, ನಮಿಸಿದರು.









# ಬಾಗಲಕೋಟೆಯಲ್ಲಿ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ





**ಬಾಗಲಕೋಟೆ :** ದಿನಾಂಕ : 05.03.2022 ಬಾಗಲಕೋಟೆಯಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಮಹಾಮಂಡಳದ ವತಿಯಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಬಾಗಲಕೋಟೆ ಜಿಲ್ಲಾ ಸಹಕಾರ ಯೂನಿಯನ್, ಬಾಗಲಕೋಟೆ ಇವರ ಸಹಯೋಗದೊಡನೆ ಬಾಗಲಕೋಟೆ, ಕೊಪ್ಪಳ ಮತ್ತು ವಿಜಯಪುರ ಜಿಲ್ಲೆಗಳಿಗೆ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಕಾರ್ಯಾಗಾರದ ಉದ್ಘಾಟನೆಯನ್ನು ಶ್ರೀ ಅಜಯಕುಮಾರ ಸರ್‌ನಾಯಕ್, ಮಾಜಿ ಸಚಿವರು ಹಾಗೂ ಅಧ್ಯಕ್ಷರು, ಬಿಡಿಸಿಸಿ ಬ್ಯಾಂಕ್, ಬಾಗಲಕೋಟೆ ಇವರು ನೆರವೇರಿಸಿದರು. ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡರವರು ಅಧ್ಯಕ್ಷತೆಯನ್ನು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶ್ರೀ ಮಹಾಂತೇಶ ಜಿ ಮಮದಾಪುರ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು ಶ್ರೀ ಮುರುಗೇಶ ಕಡ್ಲಿಮಟ್ಟಿ ಉಪಾಧ್ಯಕ್ಷರು ಬಿಡಿಸಿಸಿ ಬ್ಯಾಂಕ್, ಶ್ರೀ ವೀರಣ್ಣ ಚ ಪಟ್ಟಣಶೆಟ್ಟಿ, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಶ್ರೀ ಜಿ.ಎನ್. ಪಾಟೀಲ್ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಹಾಗೂ ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಗುರುಪಾದಪ್ಪಗೌಡ ಬ ಪಾಟೀಲ, ಶ್ರೀ ಧರೆಪ್ಪ ಮಹದೇವ ಆಲಗೂರ, ಶ್ರೀ ಹೊನ್ನಯ್ಯ ವಿ ಹಿರೇಮಠ, ಶ್ರೀ ಶೇಖರಗೌಡ ಮಾಲಿ ಪಾಟೀಲ, ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿರವರು ಹಾಗೂ ಶ್ರೀ ಕಾಶಿನಾಥ ಭೀಮಪ್ಪ ಹುಡೇದ್ ಅಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್, ಶ್ರೀ ಭೀಮಸಿ ಬಾ ಕದಂ ಅಧ್ಯಕ್ಷರು, ಜಿಲ್ಲಾ ಕೃಷಿಯೇತರ ಪತ್ತಿನ ಸಹಕಾರ ಸಂಘ ನಿ., ಬಾಗಲಕೋಟೆ ಶ್ರೀ ಶಂಕ್ರಪ್ಪ ರುದ್ರಪ್ಪ ಜನಿವಾರದ ಉಪಾಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್, ಬಾಗಲಕೋಟೆ ಹಾಗೂ ವಿಶೇಷ ಆಹ್ವಾನಿತರಾಗಿ ಶ್ರೀ ಕಲ್ಲಪ ಓಬಣ್ಣಗೋಳ ಸಹಕಾರ ಸಂಘಗಳ ಉಪನಿಬಂಧಕರು, ಬಾಗಲಕೋಟೆ ರವರು ಭಾಗವಹಿಸಿದ್ದರು.

ಶ್ರೀ ಹೆಚ್.ಎಸ್ ನಾಗರಾಜಯ್ಯ ಸಹಕಾರ ಸಂಘಗಳ ಅಪರ ನಿಬಂಧಕರು, (ನಿವೃತ್ತ) ಇವರು "ಸಹಕಾರ ಸಂಘಗಳ ಕಾಯ್ದೆಯಲ್ಲಿನ ಇತ್ತೀಚಿನ ತಿದ್ದುಪಡಿಗಳು ಮತ್ತು ಪತ್ತಿನ ಸಹಕಾರ ಸಂಘಗಳ ವ್ಯವಹಾರಗಳ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳು" ಕುರಿತು ಉಪನ್ಯಾಸ ನೀಡಿದರು. ಶ್ರೀ ಅನಿಲ್ ಭಾರದ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಪತ್ತಿನ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಮತ್ತು ಸರಕು ಮತ್ತು ಸೇವಾ ತೆರಿಗೆ (ಜಿ.ಎಸ್.ಟಿ) ಯಲ್ಲಿ ಆಗಿರುವ ಇತ್ತೀಚಿನ ತಿದ್ದುಪಡಿಗಳು ಈ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

ಈ ತರಬೇತಿ ಕಾಯಕ್ರಮದಲ್ಲಿ 450ಕ್ಕೂ ಹೆಚ್ಚು ಸಹಕಾರ ಸಂಘಗಳ ಪ್ರತಿನಿಧಿಗಳು ಹಾಜರಿದ್ದರು.





# ಬೆಂಗಳೂರಿನಲ್ಲಿ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ



**ಬೆಂಗಳೂರು** : ದಿನಾಂಕ : 25.03.2022ರಂದು ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಹಾಗೂ ಬೆಂಗಳೂರು ನಗರ ಜಿಲ್ಲಾ ಸಹಕಾರ ಯೂನಿಯನ್, ರಾಮನಗರ ಜಿಲ್ಲಾ ಸಹಕಾರ ಯೂನಿಯನ್ ಇವರುಗಳ ಸಹಯೋಗದೊಡನೆ ಬೆಂಗಳೂರುನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು. ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀಮತಿ ಕೆ.ಲಲಿತ ಜಿ.ಟಿ.ದೇವೇಗೌಡರವರು ಅಧ್ಯಕ್ಷತೆ ವಹಿಸಿದ್ದರು.

ಈ ಕಾರ್ಯಾಗಾರ ಉದ್ಘಾಟನೆಯನ್ನು ಶ್ರೀ ಜಿ.ಟಿ.ದೇವೇಗೌಡ ಶಾಸಕರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ರವರು ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಶ್ರೀ ಡಿ.ಹನುಮಂತಯ್ಯ, ಅಧ್ಯಕ್ಷರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್, ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರಪ್ರಸಾದ್‌ಗೌಡ, ಶ್ರೀ ಹೆಚ್.ಎನ್.ಅಶೋಕ್ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಸಿ.ಎಂ.ಮಾರೇಗೌಡ, ಶ್ರೀ ಎಂ.ಜೆ. ನರೇಂದ್ರಕುಮಾರ, ಶ್ರೀ ಡಿ.ಚನ್ನಯ್ಯ, ಶ್ರೀ ಕೆ.ಕೃಷ್ಣಮೂರ್ತಿ ಹಾಗೂ ಶ್ರೀ ಹೆಚ್.ಟಿ.ನಾಗೇಶ್‌ರವರು, ಶ್ರೀ ರಾಜು ರವರು ಭಾಗವಹಿಸಿದ್ದರು.



ಶ್ರೀ ಹೆಚ್.ಎಸ್ ನಾಗರಾಜಯ್ಯ, ಸಹಕಾರ ಸಂಘಗಳ ಅಪರ ನಿಬಂಧಕರು, (ನಿವೃತ್ತ) ಇವರ ಸಹಕಾರ ಸಂಘಗಳ ಕಾಯ್ದೆಯಲ್ಲಿನ ಇತ್ತೀಚಿನ ತಿದ್ದುಪಡಿಗಳು ಮತ್ತು ಪತ್ತಿನ ಸಹಕಾರ ಸಂಘಗಳ ವ್ಯವಹಾರಗಳ ಅಭಿವೃದ್ದಿಗೆ ಕೈಗೊಳ್ಳಬೇಕಾದ ಕ್ರಮಗಳು ಕುರಿತು ಉಪನ್ಯಾಸ ನೀಡಿದರು. ಶ್ರೀ ಅನಿಲ್ ಭಾರದ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಪತ್ತಿನ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಮತ್ತು ಸರಕು ಮತ್ತು ಸೇವಾ ತೆರಿಗೆ (ಜಿ.ಎಸ್.ಟಿ) ಯಲ್ಲಿ ಆಗಿರುವ ಇತ್ತೀಚಿನ ತಿದ್ದುಪಡಿಗಳು ಈ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಒಟ್ಟು 250ಕ್ಕೂ ಹೆಚ್ಚು ಸಹಕಾರ ಸಂಘಗಳ ಪ್ರತಿನಿಧಿಗಳು ಹಾಜರಿದ್ದರು. ಪ್ರತಿನಿಧಿಗಳು ಉಪನ್ಯಾಸಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಒಟ್ಟಾರೆ ಕಾರ್ಯಕ್ರಮ ತುಂಬಾ ಯಶಸ್ವಿಯಾಯಿತು.

# ಗೋಕಾಕ್‌ನಲ್ಲಿ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ





**ಗೋಕಾಕ್ :** ದಿನಾಂಕ : 07.03.2022ರಂದು ಗೋಕಾಕ, ಬೆಳಗಾವಿ ಇಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಹಾಗೂ ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್, ಬೆಳಗಾವಿ ಇವರ ಸಹಯೋಗದೊಡನೆ ಬೆಳಗಾವಿ ಜಿಲ್ಲೆಯ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರವನ್ನು ಏರ್ಪಡಿಲಾಗಿತ್ತು.

ಮುಖ್ಯ ಅತಿಥಿಗಳಾಗಿ ಶ್ರೀ ಜಗದೀಶ್ ಎಂ ಕವಟಗಿಮಠ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಇವರು ಭಾಗವಹಿಸಿದ್ದರು. ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರಪ್ರಸಾದ್ ಗೌಡರವರು ಅಧ್ಯಕ್ಷತೆ ವಹಿಸಿದ್ದರು.

ಶ್ರೀ ದೇಸಾಯಿ, ಆದಾಯ ತೆರಿಗೆ ಇಲಾಖೆ, ಬೆಳಗಾವಿ ಇವರು ಆದಾಯ ತೆರಿಗೆ ಕುರಿತಂತೆ ವಿವರಣೆ ನೀಡಿದರು. ಮಹಾಮಂಡಳದ ನಿರ್ದೇಶಕರುಗಳಾದ ಡಾ॥ ಸಂಜಯ ಪಂಚಾಕ್ಷರಿ ಹೊಸಮಠ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ, ಶ್ರೀ ಉಮೇಶ್ ಶಿ ಬಾಳಿರವರು ಹಾಗೂ ಅತಿಥಿಗಳಾಗಿ ಶ್ರೀಮತಿ ಶಾಹೀನ ಅಖ್ತರ. ಕೆ.ಸಿ.ಎಸ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೈಲಹೊಂಗಲ, ಬೆಳಗಾವಿ ಜಿಲ್ಲೆ, ಶ್ರೀ ಬಿ.ಡಿ.ಪಾಟೀಲ ಅಧ್ಯಕ್ಷರು, ಬೆಳಗಾವಿ ಜಿಲ್ಲಾ ಸಹಕಾರ



ಯೂನಿಯನ್, ಬೆಳಗಾವಿ, ಶ್ರೀ ಬಿ.ಎನ್ ಉಳ್ಳಾಗಡ್ಡಿ, ಉಪಾಧ್ಯಕ್ಷರು, ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್, ಬೆಳಗಾವಿ ಶ್ರೀ ವರ್ದಮಾನ ಬೋಳಿ ನಿರ್ದೇಶಕರು, ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್, ಬೆಳಗಾವಿ ರವರು ಭಾಗವಹಿಸಿದ್ದರು.

ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಹೆಚ್.ಟಿ. ನಾಗೇಶ್ ಹಾಗೂ ಶ್ರೀ ರವೀಂದ್ರಪ್ರಲ್ಹಾದ ಕಲಬುರ್ಗಿರವರು ಭಾಗವಹಿಸಿದ್ದರು.

ಶ್ರೀ ವಿಷ್ಣು ತೀರ್ಥ, ಸೀನಿಯರ್ ಸಬ್ ರಿಜಿಸ್ಟ್ರಾರ್, ಮುದ್ರಾಂಕ ಹಾಗೂ ನೋಂದಣಿ ಇಲಾಖೆ, ಬೆಳಗಾವಿ ಸಾಲಭದ್ರತೆಯಲ್ಲಿ ಆಸ್ತಿ ನೋಂದಣಿಯ ಮತ್ತು ಋಣಭಾರ ಪ್ರಮಾಣ ಪತ್ರ (ಎನ್‌ಕಂಬರೆನ್ಸ್) ವಿಷಯ ಕುರಿತು ಉಪನ್ಯಾಸ ನೀಡಿದರು. ಶ್ರೀ ಸಂಗಮೇಶ್ ಹೊಸಮನಿ, ಪೋಲೀಸ್ ಇನ್ಸ್‌ಪೆಕ್ಟರ್ (ಸಿಇಎನ್) ಸೈಬರ್ ಕ್ರೈಮ್ ಎಕನಾಮಿಕ್ ಅಫೆನ್ಸ್, ಬೆಳಗಾವಿ ಪೋಲೀಸ್ ಸ್ಟೇಷನ್, ಬೆಳಗಾವಿ ಇವರಿಂದ ಹಣಕಾಸು ಸಂಸ್ಥೆಗಳಲ್ಲಿ ಸೈಬರ್ ಕ್ರೈಮ್ ಕುರಿತು ಉಪನ್ಯಾಸ ನೀಡಿದರು. ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳಿಂದ ಆದಾಯ ತೆರಿಗೆ ಕುರಿತು ಉಪನ್ಯಾಸ ನೀಡಿದರು.

ಶ್ರೀ ಎಸ್.ಜಿ. ಜೋಷಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, (ನಿವೃತ್ತ) ಧಾರವಾಡ "ಸಹಕಾರ ಸಂಘಗಳ ಇತ್ತೀಚಿನ ತಿದ್ದುಪಡಿಗಳು ಹಾಗೂ ಪತ್ತಿನ ಸಹಕಾರ ಸಂಘಗಳ ಸಾಲ ವಸೂಲಾತಿಗೆ ಅನುಸರಿಸಬೇಕಾದ ಕ್ರಮಗಳು" ಬಗ್ಗೆ ಚರ್ಚೆ ಮತ್ತು ಉಪನ್ಯಾಸ ನೀಡಿದರು. ಶ್ರೀ ಅನಿಲ್ ಭಾರದ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು "ಪತ್ತಿನ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಮತ್ತು ಸರಕು ಮತ್ತು ಸೇವಾ ತೆರಿಗೆ (ಜಿ.ಎಸ್.ಟಿ)ಯಲ್ಲಿ ಆಗಿರುವ ಇತ್ತೀಚಿನ ತಿದ್ದುಪಡಿಗಳ ಬಗ್ಗೆ" ಉಪನ್ಯಾಸ ನೀಡಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಒಟ್ಟು 350ಕ್ಕೂ ಹೆಚ್ಚು ಸಹಕಾರ ಸಂಘಗಳ ಪ್ರತಿನಿಧಿಗಳು ಹಾಜರಿದ್ದರು. ಪ್ರತಿನಿಧಿಗಳು ಉಪನ್ಯಾಸಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

# ಹುಬ್ಬಳ್ಳಿಯಲ್ಲಿ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ



**ಹುಬ್ಬಳ್ಳಿ :** ದಿನಾಂಕ : 08.03.2022ರಂದು ಹುಬ್ಬಳ್ಳಿ ಇಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಹಾಗೂ ಧಾರವಾಡ ಜಿಲ್ಲಾ ಸಹಕಾರ ಯೂನಿಯನ್, ಧಾರವಾಡ ಇವರ ಸಹಯೋಗದೊಡನೆ ಧಾರವಾಡ, ಗದಗ, ಹಾವೇರಿ ಮತ್ತು ಉತ್ತರಕನ್ನಡ ಜಿಲ್ಲಾ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಕಾರ್ಯಾಗಾರದ ಉದ್ಘಾಟನೆಯನ್ನು ಶ್ರೀ ಶೇಖರಗೌಡ ಮಾಲಿಪಾಟೀಲ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಮತ್ತು ನಿರ್ದೇಶಕರು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ. ಬೆಂಗಳೂರು ಇವರು ನೆರವೇರಿಸಿದರು.

ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರಪ್ರಸಾದ್ ಗೌಡರವರು ಅಧ್ಯಕ್ಷತೆಯನ್ನು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶ್ರೀ ಬಾಮುಗೌಡ ಡಿ ಪಾಟೀಲ, ವೃತ್ತಿಪರ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಶ್ರೀ ಗುರುರಾಜ ಆಯ್ ಹುಣಸಿಮರದ ಮಾಜಿ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಮಹಾಮಂಡಳದ ನಿರ್ದೇಶಕರಾದ ಡಾ॥ ಸಂಜಯ ಪಂಚಾಕ್ಷರಿ ಹೊಸಮಠ, ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿ, ಶ್ರೀ ಉಮೇಶ್ ಶಿ ಬಾಳಿ, ಹಾಗೂ ಅತಿಥಿಗಳಾಗಿ ಶ್ರೀಮತಿ ರಂಜನಾ ತಿ ಪೋಳ. ಕೆ.ಸಿ.ಎಸ್ ಸಹಕಾರ ಸಂಘಗಳ ಉಪನಿಬಂಧಕರು, ಧಾರವಾಡ ಜಿಲ್ಲೆ ರವರು ಭಾಗವಹಿಸಿದ್ದರು.

ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಹೊನ್ನಯ್ಯ ವಿ ಹಿರೇಮಠರವರು, ಶ್ರೀ ಹೆಚ್.ಟಿ. ನಾಗೇಶ್‌ರವರು ಶ್ರೀ ಡಿ.ಆರ್. ನಾಗೇಶಪ್ಪರವರು, ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

ಶ್ರೀ ವಿನಾಯಕ್ ಎಸ್ ಘೋರ್ಪಡೆ, ಸಹಾಯಕ ಆಯುಕ್ತರು, ಮುದ್ರಾಂಕ ಹಾಗೂ ನೋಂದಣಿ ಇಲಾಖೆ, ಬೆಳಗಾವಿ ಇವರು "ಸಾಲಭದ್ರತೆಯಲ್ಲಿ ಆಸ್ತಿ ನೋಂದಣಿಯ ಮತ್ತು ಋಣಭಾರ ಪ್ರಮಾಣ ಪತ್ರ (ಎನ್‌ಕಂಬರೆನ್ಸ್)" ವಿಷಯ ಕುರಿತು ಉಪನ್ಯಾಸ ನೀಡಿದರು.

ಶ್ರೀ ಎಂ.ಎಸ್.ಹೂಗಾರ, ಪೋಲೀಸ್ ಇನ್ಸ್‌ಪೆಕ್ಟರ್ (ಸಿಇಎನ್) ಸೈಬರ್ ಕ್ರೈಮ್ ಎಕನಾಮಿಕ್ ಅಫೆನ್ಸ್, ಹುಬ್ಬಳ್ಳಿ ಪೋಲೀಸ್ ಸ್ಟೇಷನ್, ಹುಬ್ಬಳ್ಳಿ ಧಾರವಾಡ ಇವರಿಂದ" ಹಣಕಾಸು ಸಂಸ್ಥೆಗಳಲ್ಲಿ ಸೈಬರ್ ಕ್ರೈಮ್ ಕುರಿತು ಉಪನ್ಯಾಸ ನೀಡಿದರು. ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳಿಂದ ಆದಾಯ ತೆರಿಗೆ ಕುರಿತು ಉಪನ್ಯಾಸ ನೀಡಿದರು.

ಶ್ರೀ ಎಸ್.ಜಿ.ಜೋಷಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, (ನಿವೃತ್ತ) ಧಾರವಾಡ ಇವರು "ಸಹಕಾರ ಸಂಘಗಳ ಇತ್ತೀಚಿನ ತಿದ್ದುಪಡಿಗಳು ಹಾಗೂ ಪತ್ತಿನ ಸಹಕಾರ ಸಂಘಗಳ ಸಾಲ ವಸೂಲಾತಿಗೆ ಅನುಸರಿಸಬೇಕಾದ ಕ್ರಮಗಳ" ಬಗ್ಗೆ ಉಪನ್ಯಾಸ ನೀಡಿದರು.

ಶ್ರೀ ಅನಿಲ್ ಭಾರದ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಪತ್ತಿನ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಮತ್ತು ಸರಕು ಮತ್ತು ಸೇವಾ ತೆರಿಗೆ (ಜಿ.ಎಸ್.ಟಿ)ಯಲ್ಲಿ ಆಗಿರುವ ಇತ್ತೀಚಿನ ತಿದ್ದುಪಡಿಗಳ ಬಗ್ಗೆ ಉಪನ್ಯಾಸ ನೀಡಿದರು.

ಈ ತರಬೇತಿ ಕಾರ್ಯಾಗಾರದಲ್ಲಿ ಒಟ್ಟು 250ಕ್ಕೂ ಹೆಚ್ಚು ಸಹಕಾರ ಸಂಘಗಳ ಪ್ರತಿನಿಧಿಗಳು ಹಾಜರಿದ್ದರು. ಪ್ರತಿನಿಧಿಗಳು ಉಪನ್ಯಾಸಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.



# ಕಲಬುರ್ಗಿಯಲ್ಲಿ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ



**ಕಲಬುರಗಿ** : ದಿನಾಂಕ : 03–03–2022ರಂದು ಕಲಬುರ್ಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಸುವರ್ಣ ಸಭಾಭವನದಲ್ಲಿ ಪತ್ತಿನ ಮಹಾಮಂಡಳದ ವತಿಯಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಹಾಗೂ ಕಲಬುರಗಿ ಜಿಲ್ಲಾ ಸಹಕಾರ ಯೂನಿಯನ್, ಕಲಬುರಗಿ ಇವರುಗಳ ಸಹಯೋಗದೊಡನೆ ಕಲಬುರಗಿ, ಬಳ್ಳಾರಿ, ರಾಯಚೂರು, ಬೀದರ್ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರಪ್ರಸಾದ್ ಗೌಡ ರವರು ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶ್ರೀ ಜೆ.ಎಂ.ಶಿವಪ್ರಸಾದ್ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಶೇಖರಗೌಡ ಮಾಲಿಪಾಟೀಲ ಶ್ರೀ ಧರೇಪ್ಪ ಮಹದೇವ ಆಲಗೂರ, ಶ್ರೀ ಗುರುಪಾದಪ್ಪಗೌಡ ಬ ಪಾಟೀಲ, ಶ್ರೀ ಹೊನ್ನಯ್ಯ ವಿ ಹಿರೇಮಠ, ಹಾಗೂ ಶ್ರೀ ವೀರಾರೆಡ್ಡಿ ಎಸ್.ಪಾಟೀಲ ಅಧ್ಯಕ್ಷರು, ಕಲಬುರಗಿ ಮತ್ತು ಯಾದಗಿರ ಜಿಲ್ಲಾ ಸಹಕಾರ ಒಕ್ಕೂಟ ನಿ., ಕಲಬುರಗಿ, ಶ್ರೀಮತಿ ವರಲಕ್ಷ್ಮಿ ಆರ್ ಪಾಟೀಲ ಉಪಾಧ್ಯಕ್ಷರು, ಕಲಬುರಗಿ ಜಿಲ್ಲಾ ಸಹಕಾರ ಯೂನಿಯನ್ ನಿ. ಕಲಬುರಗಿ ಶ್ರೀ ಚವ್ಹಾಣ ಗೋಪಾಲ, ಜಂಟಿ ನಿಬಂಧಕರು, ಕಲಬುರಗಿ ಪ್ರಾಂತ ರಾಯಚೂರು ಶ್ರೀ ಚಿದಾನಂದ ಎಸ್.ನಿಂಬಾಳ, ಉಪನಿಬಂಧಕರು ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಕಲಬುರಗಿ ರವರು ಭಾಗವಹಿಸಿದ್ದರು. ಮಹಾಮಂಡಳದ ನಿರ್ದೇಶಕರಾದ ಶ್ರೀ ಹೆಚ್.ಟಿ.ನಾಗೇಶ್ ರವರು ಭಾಗವಹಿಸಿದ್ದರು. ಶ್ರೀ ಹೆಚ್.ಎಸ್ ನಾಗರಾಜಯ್ಯ ಸಹಕಾರ ಸಂಘಗಳ ಅಪರ ನಿಬಂಧಕರು, (ನಿವೃತ್ತ) ಇವರ ಸಹಕಾರ ಸಂಘಗಳ ಕಾಯ್ದೆಯಲ್ಲಿನ ಇತ್ತೀಚಿನ ತಿದ್ದುಪಡಿಗಳು ಮತ್ತು ಪತ್ತಿನ ಸಹಕಾರ ಸಂಘಗಳ ವ್ಯವಹಾರಗಳ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳು ಕುರಿತು ಉಪನ್ಯಾಸ ನೀಡಿದರು.

ಶ್ರೀ ಅನಿಲ್ ಭಾರದ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಪತ್ತಿನ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಮತ್ತು ಸರಕು ಮತ್ತು ಸೇವಾ ತೆರಿಗೆ (ಜಿ.ಎಸ್.ಟಿ) ಯಲ್ಲಿ ಆಗಿರುವ ಇತ್ತೀಚಿನ ತಿದ್ದುಪಡಿಗಳು ಈ ವಿಷಯಗಳ ಕುರಿತು ಉಪನ್ಯಾಸ ನೀಡಿದರು.





# ತುಮಕೂರಿನಲ್ಲಿ ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ನಿರ್ದೇಶಕರು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ



**ತುಮಕೂರು :** ದಿನಾಂಕ:24.03.2022ರಂದು ತುಮಕೂರು ಇಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ತುಮಕೂರು ಜಿಲ್ಲಾ ಸಹಕಾರ ಯೂನಿಯನ್, ತುಮಕೂರು ಇವರುಗಳ ಸಹಯೋಗದೊಡನೆ ತುಮಕೂರು, ಚಿತ್ರದುರ್ಗ, ಕೋಲಾರ, ಚಿಕ್ಕಾಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್ ಗೌಡರವರು ಅಧ್ಯಕ್ಷತೆ ವಹಿಸಿದ್ದರು. ಈ ಕಾರ್ಯಾಗಾರದ ಉದ್ಘಾಟನೆಯನ್ನು ಶಾಸಕ ಜಿ.ಬಿ. ಜ್ಯೋತಿಗಣೇಶ್ ರವರು ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಶ್ರೀ ಜಿ.ಬಿ. ವೆಂಕಟೇಗೌಡ, ಅಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್, ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಡಿ. ಮಲ್ಲಿಕಾರ್ಜುನಯ್ಯ, ಶ್ರೀ ಡಿ.ಆರ್. ನಾಗೇಶಯ್ಯ, ಶ್ರೀ ಬಿ.ಡಿ. ಭೂಕಾಂತ, ಶ್ರೀ ವಿ. ರಾಜು, ಶ್ರೀ ಡಿ. ಚನ್ನಯ್ಯ ಹಾಗೂ ಶ್ರೀ ಹೆಚ್.ಟಿ. ನಾಗೇಶ್‌ರವರು ಭಾಗವಹಿಸಿದ್ದರು.

ಶ್ರೀ ಹೆಚ್.ಎಸ್. ನಾಗರಾಜಯ್ಯ ಸಹಕಾರ ಸಂಘಗಳ ಅಪರ ನಿಬಂಧಕರು, (ನಿವೃತ್ತ) ಇವರ ಸಹಕಾರ ಸಂಘಗಳ ಕಾಯ್ದೆಯಲ್ಲಿನ ಇತ್ತೀಚಿನ ತಿದ್ದುಪಡಿಗಳು ಮತ್ತು ಪತ್ತಿನ ಸಹಕಾರ ಸಂಘಗಳ ವ್ಯವಹಾರಗಳ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳು ಕುರಿತು ಉಪನ್ಯಾಸ ನೀಡಿದರು.

ಶ್ರೀ ಅನಿಲ್ ಭಾರದ್ವಾಜ್, ಸನ್ನದು ಲೆಕ್ಕಪರಿಶೋಧಕರು ಇವರು ಪತ್ತಿನ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಮತ್ತು ಸರಕು ಮತ್ತು ಸೇವಾ ತೆರಿಗೆ (ಜಿ.ಎಸ್.ಟಿ) ಯಲ್ಲಿ ಆಗಿರುವ ಇತ್ತೀಚಿನ ತಿದ್ದುಪಡಿಗಳು ಈ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಒಟ್ಟು 100ಕ್ಕೂ ಹೆಚ್ಚು ಸಹಕಾರ ಸಂಘಗಳ ಪ್ರತಿನಿಧಿಗಳು ಹಾಜರಿದ್ದರು. ಪ್ರತಿನಿಧಿಗಳು ಉಪನ್ಯಾಸಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.





# ಅಭಿನಂದನೆ ಸಲ್ಲಿಕೆ






ಪತ್ತಿನ ಸಹಕಾರ ಮಹಾಮಂಡಳದ ನಿರ್ದೇಶಕರಾದ ಶ್ರೀ ಸಿ.ಎಂ.ಮಾರೇಗೌಡರವರು, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾಗಿ ಆಯ್ಕೆಯಾಗಿರುವುದನ್ನು ಮತ್ತು ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ವಿ.ರಾಜು ಹಾಗೂ ಶ್ರೀ ಚಿತ್ತರಂಜನ್ ಬೋಳಾರ್ ಅವರುಗಳು 2021ನೇ ಸಾಲಿನ "ಸಹಕಾರ ರತ್ನ" ಪ್ರಶಸ್ತಿಗೆ ಭಾಜನರಾದ ಹಿನ್ನೆಲೆಯಲ್ಲಿ ಶ್ರೀಯುತರುಗಳನ್ನು ಸನ್ಮಾನಿಸಿ ಅಭಿನಂದಿಸಿಲಾಯಿತು.




ಶ್ರೀ ತ್ಯಾಗರಾಜನಗರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ನಿಯಮಿತ, ಬೆಂಗಳೂರು ಇದರ ಚುನಾವಣೆಯಲ್ಲಿ ಆಡಳಿತ ಮಂಡಳಿಗೆ 2022ರಿಂದ 2027ರ ಅವಧಿಗೆ ಅವಿರೋಧವಾಗಿ ಅಧ್ಯಕ್ಷರಾಗಿ ಡಾ. ಕೃಷ್ಣ ಟಿ.ರವರು ಮತ್ತು ಉಪಾಧ್ಯಕ್ಷರಾಗಿ ಶ್ರೀ ನಾಗರಾಜು ಎ.ಎಮ್. ಹಾಗೂ ಅವಿರೋದವಾಗಿ ಅಯ್ಕೆಯಾದ ನಿರ್ದೇಶಕರುಗಳೊಂದಿಗೆ ಚುನಾವಣಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



# ಸಹಕಾರ ಮಾರ್ಗದರ್ಶಿ :
# ಆಧುನಿಕ ಸಹಕಾರ ಚಳುವಳಿಯ ಉಗಮ

▸▸ **ಬಸವೇಗೌಡ,** ನಿವೃತ್ತ ಅಪರ ನಿಬಂಧಕರು ಹಾಗೂ ಅಧ್ಯಕ್ಷರು, ಕರ್ನಾಟಕ ಪ್ರಗತಿಪರ ಸಹಕಾರಿಗಳ ವೇದಿಕೆ (ರಿ.) ಬೆಂಗಳೂರು.

... ಹಿಂದಿನ ಸಂಚಿಕೆಯಿಂದ

ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (Karnataka State Cooperative Agricultural & Rural Development Bank – K.S.C.A.R.D.B)

ಇದರ ಕಾರ್ಯ ವ್ಯಾಪ್ತಿಯು ರಾಜ್ಯ ಮಟ್ಟದಾಗಿರುತ್ತದೆ. ಇದರಲ್ಲಿ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗಳು ಷೇರುಧನ ಪಾವತಿಸಿ ಸದಸ್ಯತ್ವ ಪಡೆದಿರುತ್ತವೆ. ಇದರ ಮುಖ್ಯ ಧ್ಯೇಯೋದ್ದೇಶವು ದೀರ್ಘಾವಧಿಯ ಕೃಷಿ ಸಾಲಗಳನ್ನು P.C.A.R.D.B ಗಳ ಮೂಲಕ ರೈತರಿಗೆ ಒದಗಿಸುವುದಾಗಿರುತ್ತದೆ. ರೈತರ ಭೂಮಿಯನ್ನು ಅಡಮಾನ ಮಾಡಿಕೊಂಡು ಕೃಷಿ ಸಾಲದ ಯೋಜನೆಗನುಸಾರ 7 ರಿಂದ 15 ವರ್ಷಗಳ ಅವಧಿಯ ಕೃಷಿ ಹೂಡಿಕೆ ಸಾಲಗಳನ್ನು ನೀಡುವ ಪ್ರಾಥಮಿಕ ಬ್ಯಾಂಕ್‌ಗಳು, ಇದೇ ಭೂಮಿಯನ್ನು ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿಗೆ ಸಾಲ ಪಡೆಯುವುದಕ್ಕಾಗಿ ಅಡಮಾನ ಮಾಡುತ್ತವೆ.

ಈ ಬ್ಯಾಂಕಿನ ದುಡಿಯುವ ಬಂಡವಾಳವು ಸದಸ್ಯರಿಂದ ಪಾವತಿಯಾದ ಷೇರುಧನ, ಸ್ವಂತ ನಿಧಿಗಳು, ಠೇವಣಿಗಳು ಮತ್ತು ನಬಾರ್ಡ್‌ನಿಂದ ಪಡೆಯುವ ಸಾಲಗಳಿಂದ ಕೂಡಿರುತ್ತದೆ. ರೈತರಿಗೆ ಸಾಲಗಳನ್ನು ನೀಡುವುದಕ್ಕೆ ಬೇಕಾದ ಹಣಕಾಸನ್ನು ಸಾಲ ಪತ್ರಗಳನ್ನು (Debentures) ಹೊರಡಿಸುವುದರ ಮೂಲಕ ರಾಜ್ಯಮಟ್ಟದ ಈ ಬ್ಯಾಂಕ್ ಸಂಗ್ರಹಿಸುತ್ತದೆ. ಸಾಲ ಪತ್ರಗಳ ಅಸಲು ಮತ್ತು ಬಡ್ಡಿ ಪಾವತಿಗೆ ರಾಜ್ಯ ಸರ್ಕಾರದ ಖಾತರಿ ಇರುತ್ತದೆ. ಬ್ಯಾಂಕಿಂಗ್ ರೆಗ್ಯೂಲೇಷನ್ ಆಕ್ಟ್ ಪ್ರಕಾರ ಸಾಲದ ಪತ್ರಗಳನ್ನು ಭದ್ರತಾ ಪತ್ರಗಳೆಂದು ಪರಿಗಣಿಸಲಾಗುತ್ತದೆ. ಸಾಲ ಪತ್ರಗಳ ಬಿಡುಗಡೆಗೆ ಟ್ರಸ್ಟ್ ಒಂದು ಏರ್ಪಟ್ಟಿದ್ದು ಸಹಕಾರ ಸಂಘಗಳ ನಿಬಂಧಕರು ಟ್ರಸ್ಟಿಯಾಗಿರುತ್ತಾರೆ. ಈ ಸಾಲ ಪತ್ರಗಳಿಗೆ ಸ್ಟಾಂಪ್ ಶಿಲ್ಕು ಇರುವುದಿಲ್ಲ. ಬ್ಯಾಂಕಿನ ಸಾಮಾನ್ಯ ಯೋಜನೆಗಳಿಗೆ ಸಂಬಂಧಿಸಿದಂತೆ ಸಾಮಾನ್ಯ ಸಾಲಪತ್ರಗಳನ್ನು (General Debentures) ಹಾಗೂ ವಿಶೇಷ ಯೋಜನೆಗಳನ್ನು ರೂಪಿಸಿಕೊಂಡಾಗ ವಿಶೇಷ ಸಾಲಪತ್ರಗಳನ್ನು (Special Debentures) ಬ್ಯಾಂಕ್ ಬಿಡುಗಡೆ ಮಾಡಿ ಬಂಡವಾಳವನ್ನು ಸಂಗ್ರಹಿಸುತ್ತದೆ.

ಬ್ಯಾಂಕಿನ ಆಡಳಿತವನ್ನು ಸದಸ್ಯ ಸಂಸ್ಥೆಗಳಿಂದ ಚುನಾಯಿತವಾದ ಆಡಳಿತಮಂಡಳಿ ಹಾಗೂ ಆ ಆಡಳಿತಮಂಡಳಿ ಸದಸ್ಯರೊಳಗಿನಿಂದ ಚುನಾಯಿತರಾದ ಪದಾಧಿಕಾರಿಗಳು ಅಧ್ಯಕ್ಷರು, ಉಪಾಧ್ಯಕ್ಷರು ನಿರ್ವಹಿಸುತ್ತಾರೆ. ವ್ಯವಸ್ಥಾಪಕ ನಿರ್ದೇಶಕರು ಹಾಗೂ ಇತರೆ ಅಧಿಕಾರಿ ಸಿಬ್ಬಂದಿ ವರ್ಗವು ಬ್ಯಾಂಕಿನ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಾರೆ. ಆಡಳಿತ ಮಂಡಳಿಯ ಮತ್ತು ಪದಾಧಿಕಾರಿಗಳ ಅವಧಿಯು ಪ್ರಸ್ತುತ 5 ವರ್ಷಗಳಿರುತ್ತದೆ. ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (National Bank For Agricultural & Rural Development –NABARD)

ಕೃಷಿ ಮತ್ತು ಗ್ರಾಮೀಣಾಭಿವೃದ್ಧಿಗೆ ಭಾರತೀಯ ರಿಸರ್ವ್ ಬ್ಯಾಂಕ್ ತನ್ನಲ್ಲೇ ಇದ್ದ ಪ್ರತ್ಯೇಕ (ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ) ವಿಭಾಗದ ಮೂಲಕ ಸಾಲ ಸೌಲಭ್ಯಗಳನ್ನು ನೀಡುತಿತ್ತು. ನಂತರ ಇದರ ಬದಲಿಗೆ 1982ರ ಜುಲೈ 1 ರಂದು ರಾಷ್ಟ್ರ ಮಟ್ಟದಲ್ಲಿ "ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್–ನಬಾರ್ಡ್" ಎಂಬ ಪ್ರತ್ಯೇಕ ಬ್ಯಾಂಕ್‌ನ್ನು ಸ್ಥಾಪಿಸಲಾಯಿತು. ಕೃಷಿ ಸಾಲ ನೀಡುವುದು ಮತ್ತು ಕೃಷಿ ಅಭಿವೃದ್ಧಿ ಹಾಗೂ ಗ್ರಾಮೀಣಾಭಿವೃದ್ಧಿ ಸಂಬಂಧಿತ ಆರ್ಥಿಕ ಚಟುವಟಿಕೆಗಳುಳ್ಳ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುವ ಉದ್ದೇಶಗಳನ್ನು ಹೊಂದಿರುತ್ತದೆ. ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಕರಕುಶಲ ಕಾರ್ಮಿಕರು, ಸಣ್ಣ ಕಸುಬುದಾರರು ಇತ್ಯಾದಿ ಉದ್ದೇಶಗಳಿಗೆ ಕೃಷಿಯೇತರ ಸಾಲಗಳನ್ನು ನೀಡುತ್ತದೆ.

ಕೃಷಿ ಸಾಲಗಳನ್ನು ಸಹಕಾರ ಬ್ಯಾಂಕುಗಳಿಗೆ, ವಾಣಿಜ್ಯ ಬ್ಯಾಂಕುಗಳಿಗೆ ಮತ್ತು ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಿಗೆ (Regional Rural Banks) ನೀಡುತ್ತದೆ. ಬೆಳೆ ಸಾಲವನ್ನು ಪುನರ್‌ಧನ (Refinance) ರೂಪದಲ್ಲಿ ನೀಡುತ್ತದೆ. ಅಂದರೆ, ಬ್ಯಾಂಕುಗಳು ಕೃಷಿ ಉದ್ದೇಶಕ್ಕೆ ರೈತರಿಗೆ ನೀಡಿದ ಸಾಲಗಳನ್ನು ಆಧರಿಸಿ ಅವುಗಳಿಗೆ ನಬಾರ್ಡ್ ಪುನರ್‌ಧನವಾಗಿ ಅರ್ಹತೆ ಆಧರಿಸಿ ನೀಡಲಾಗುತ್ತದೆ. ಆರ್‌ಬಿಐ ನಿಂದ ನಬಾರ್ಡ್‌ಗೆ ವಹಿಸಿರುವಂತೆ ಸಹಕಾರ ಬ್ಯಾಂಕುಗಳ ತನಿಖೆಯನ್ನು ಕೈಗೊಳ್ಳುತ್ತದೆ. ಬ್ಯಾಂಕರುಗಳ ಗ್ರಾಮೀಣಾಭಿವೃದ್ಧಿ ಸಂಸ್ಥೆ (Banker's Institute of Rural Development - BIRD) ತರಬೇತಿ ಸಂಸ್ಥೆಯ ಮೂಲಕ ಬ್ಯಾಂಕುಗಳ ಸಿಬ್ಬಂಧಿಗೆ ನೀಡಲಾಗುತ್ತದೆ. ಮಂಗಳೂರಿನಲ್ಲೂ ಸಹ ಇಂತಹ ತರಭೇತಿ ಸಂಸ್ಥೆ ಇರುತ್ತದೆ. ಈ ತರಭೇತಿ ಸಂಸ್ಥೆಯ ಕೇಂದ್ರ ಸ್ಥಾನವು ಲಕ್ನೋ, ಉತ್ತರ ಪ್ರದೇಶದಲ್ಲಿರುತ್ತದೆ.

ಸ್ವಸಹಾಯ ಗುಂಪುಗಳ ಮತ್ತು ಜಂಟಿ ಹೊಣೆಗಾರಿಕೆ ಗುಂಪುಗಳ ರಚನೆಗೆ ಪ್ರೋತ್ಸಾಹ ಹಾಗೂ ಅವುಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಬ್ಯಾಂಕುಗಳ ಮೂಲಕ ಸಾಲದ ಸೌಲಭ್ಯ ಒದಗಿಸುತ್ತದೆ. ಒಟ್ಟಾರೆ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದಂತೆ ಅನೇಕ ಯೋಜನೆಗಳನ್ನು ರೂಪಿಸಿ ಅವುಗಳ ಅನುಷ್ಠಾನಕ್ಕೆ ಮಾರ್ಗದರ್ಶನ ಹಾಗೂ ಆರ್ಥಿಕ ನೆರವನ್ನು ಸಂಬಂಧಿಸಿದ ಸಂಸ್ಥೆಗಳಿಗೆ ಒದಗಿಸುತ್ತದೆ.

(ಮುಂದಿನ ಸಂಚಿಕೆಗೆ)

# ಸ್ಪರ್ಧಾತ್ಮಕ ಸಹಕಾರಿ ಪ್ರಶ್ನೋತ್ತರಗಳು – ಓದಿ ಉತ್ತರಿಸಿ

**1. ಸಹಕಾರ ಸಂಘವು ದೊರಕಿಸಿಕೊಡುವಂತ ಕನಿಷ್ಠ ಸೇವೆಗಳನ್ನು ಸದಸ್ಯರು ಬಳಸಿಕೊಳ್ಳುವಂತೆ ಸಂಘವು ________ ರಲ್ಲಿ ಅಳವಡಿಸಿಕೊಳ್ಳಬೇಕಾಗಿದೆ.**

ಎ) ಕಾಯ್ದೆ ಮತ್ತು ನಿಯಮಗಳು

ಬಿ) ಉಪವಿಧಿಗಳು

ಸಿ) ಅಧಿಸೂಚನೆಗಳು

ಡಿ) ಸುತ್ತೋಲೆಗಳು

**2. ಆಡಳಿತ ಮಂಡಲಿಯಲ್ಲಿ ಕಾರ್ಯಾನುಗುಣ ನಿರ್ದೇಶಕರ (functional director) ಪಾತ್ರ ________ ಆಗಿದೆ.**

ಎ) ಪದಾಧಿಕಾರಿಗಳ ಆಯ್ಕೆ ಮಾಡುವುದು;

ಬಿ) ನಿರ್ದೇಶಕರ ಸ್ಥಾನಕ್ಕೆ ಸ್ಪರ್ಧಿಸುವುದು

ಸಿ) ಆಡಳಿತ ಮಂಡಲಿಯಲ್ಲಿ ಸೂಕ್ತ ತೀರ್ಮಾನ ಕೈಗೊಳ್ಳಲು ಸಹಕರಿಸುವುದು

ಡಿ) ಯಾವುದು ಅಲ್ಲ.

**3. ಆಡಳಿತ ಮಂಡಲಿಯಲ್ಲಿ ಸರ್ಕಾರದಿಂದ ನಾಮಕರಣಗೊಂಡ ಸದಸ್ಯರ ಅವಧಿ ________ ಆಗಿದೆ.**

ಎ) ಐದು ವರ್ಷಗಳು

ಬಿ) ಮೂರು ವರ್ಷಗಳು

ಸಿ) ಒಂದು ವರ್ಷ

ಡಿ) ಸರ್ಕಾರದ ಇಚ್ಛೆಗೆ ಒಳಪಟ್ಟಿರುತ್ತದೆ.

**4. ಆಡಳಿತ ಮಂಡಲಿ ಸಭೆಗೆ ಅಗತ್ಯವಿರುವ ಕೋರಂ ________**

ಎ) ಶೇ 25

ಬಿ) ಶೇ 50

ಸಿ) ಶೇ 50ರ ನಂತರದ ಪೂರ್ಣ ಸಂಖ್ಯೆ

ಡಿ) ಶೇ 100 ರಷ್ಟು

**5. ವೃತ್ತಿಪರ ಮತ್ತು ಕಾರ್ಯಾನುಗುಣ ನಿರ್ದೇಶಕರನ್ನು ________**

ಎ) ಆಡಳಿತ ಮಂಡಲಿಯ ಕೋರಂ ಎಂದು ಪರಿಗಣಿಸುವುದು

ಬಿ) ವೃತ್ತಿಪರ ನಿರ್ದೇಶಕರನ್ನು ಮಾತ್ರ ಕೋರಂ ಎಂದು ಪರಿಗಣಿಸುವುದು

ಸಿ) ವೃತ್ತಿಪರ ಮತ್ತು ಕಾರ್ಯಾನುಗುಣ ನಿರ್ದೇಶಕರನ್ನು ಕೋರಂ ಎಂದು ಪರಿಗಣಿಸಲಾಗದು

ಡಿ) ಯಾವುದು ಅಲ್ಲ

**6. ಉನ್ನತ ಅಧಿಕಾರವುಳ್ಳ ಸಹಕಾರ ಸಮಿತಿಯು ಇವರ ಅಧ್ಯಕ್ಷತೆಯಲ್ಲಿ ರಚಿಸಿಕೊಂಡಿರುತ್ತದೆ ________**

ಎ) ಶ್ರೀ ಹೆಚ್.ಕೆ.ಪಾಟೀಲ್

ಬಿ) ಶ್ರೀ ಶಿವಾಜಿರಾವ ಪಾಟೀಲ್

ಸಿ) ಶ್ರೀ ರಾಮ್‌ವಿಲಾಸ್ ಮಿದಾಕಿ

ಡಿ) ಶ್ರೀ ಎಸ್ ಟಿ ರಾಜ

**7. ಸಹಕಾರ ಸಂಸ್ಥೆಗಳಿಗೆ ____ ಸಂವಿಧಾನದಲ್ಲೆ ಸ್ಥಾನ ಸಲ್ಲಿಸಲಾಗಿದೆ.**

ಎ) 94ನೇ ತಿದ್ದುಪಡಿ

ಬಿ) 95ನೇ ತಿದ್ದುಪಡಿ

ಸಿ) 97ನೇ ತಿದ್ದುಪಡಿ

ಡಿ) 96ನೇ ತಿದ್ದುಪಡಿ

**8. 97ನೇ ಸಂವಿಧಾನ ತಿದ್ದುಪಡಿಯ ರಾಷ್ಟ್ರಾಧ್ಯಕ್ಷರಿಂದ ________ ದಿನಾಂಕದಂದು ಒಪ್ಪಿಗೆ ಪಡೆದಿರುತ್ತದೆ.**

ಎ) 12–01–2009

ಬಿ) 12–01–2010

ಸಿ) 12–01–2011

ಡಿ) 12–01–2012

**9. ಭಾರತದ ಸಂವಿಧಾನದ ಪರಿಚ್ಛೇದ ________ ರೀತ್ಯಾ ಸಹಕಾರ ಸಂಘಗಳ ರಚನೆ ನಾಗರಿಕರ ಮೂಲಭೂತ ಹಕ್ಕಾಗಿದೆ.**

ಎ) ಪರಿಚ್ಛೇದ 19

ಬಿ) ಪರಿಚ್ಛೇದ 20(1)

ಸಿ) ಪರಿಚ್ಛೇದ 21(1)

ಡಿ) ಪರಿಚ್ಛೇದ 22(2)

**10. ಭಾರತದ ಸಂವಿಧಾನದ ಭಾಗ ____ರ ಪರಿಚ್ಛೇದ ___ ರಲ್ಲಿ ಸಹಕಾರ ವಿಷಯವನ್ನು ರಾಜ್ಯ ನಿರ್ದೇಶಕರ ತತ್ವಗಳಡಿಯಲ್ಲಿ ಸೇರ್ಪಡೆಗೊಳಿಸಿದೆ.**

ಎ) ಪರಿಚ್ಛೇದ–40ಬಿ

ಬಿ) ಪರಿಚ್ಛೇದ–41ಬಿ

ಸಿ) ಪರಿಚ್ಛೇದ–42ಬಿ

ಡಿ) ಪರಿಚ್ಛೇದ–43ಬಿ

**ಹಿಂದಿನ ಸಂಚಿಕೆಯ ಪ್ರಶ್ನೆಗಳಿಗೆ ಉತ್ತರಗಳು :**

1 -C , 2 -D , 3 –C , 4 –B , 5 – B, 6 – C, 7 – B, 8 – D, 9 –D , 10 – C